ವಿಜಯಪುರ | ಸಂಪುಟ 04 | ಸಂಚಿಕೆ 047 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಏಪ್ರಿಲ್, 08, 2026



"ಬಿಜೆಪಿಯಿಂದ ಉಚ್ಚಾಟಿತರಾಗಿರುವ ಹಿರಿಯ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಕೆಲವೇ ದಿನಗಳಲ್ಲಿ ವಾಪಸ್ ಬಿಜೆಪಿಗೆ ಬರುತ್ತಾರೆ. ನಾನು ಅವರನ್ನು ಮತ್ತೆ ಬಿಜೆಪಿಗೆ ಕರೆತರುವ ಪ್ರಯತ್ನ ಮಾಡುತ್ತಿದ್ದೇನೆ. ಈಗಾಗಲೇ ಒಂದು ವೇದಿಕೆ ಸಜ್ಜಾಗಿದೆ."

■ ರಮೇಶ್ ಜಾರಕಿಹೊಳಿ
ಬಿಜೆಪಿ ಶಾಸಕರು, ಮಾಜಿ ಸಚಿವರು

## ಏ.9 ರಂದು ನಡೆಯಲಿರುವ ಉಪಚುನಾವಣೆ । ಎರಡೂ ಕ್ಷೇತ್ರಗಳಲ್ಲಿ ಬಿಜೆಪಿಗೆ ಗೆಲ್ಲುವ ಅವಕಾಶ । ವಿಪಕ್ಷ ನಾಯಕ ಆರ್.ಅಶೋಕ ಹೇಳಿಕೆ

# ಕಾಂಗ್ರೆಸ್ ಭವಿಷ್ಯ ನಿರ್ಧರಿಸಲಿರುವ ಉಪಚುನಾವಣೆ ಫಲಿತಾಂಶ

ಬೆಂಗಳೂರು: ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಫಲಿತಾಂಶ ರಾಜ್ಯದಲ್ಲಿನ ಆಡಳಿತಾರೂಢ ಕಾಂಗ್ರೆಸ್‌ನ ಭವಿಷ್ಯವನ್ನು ನಿರ್ಧರಿಸಲಿದೆ ಎಂದು ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹೇಳಿದ್ದಾರೆ.

ಏಪ್ರಿಲ್ 9 ರಂದು ನಡೆಯಲಿರುವ ಉಪಚುನಾವಣೆಯಲ್ಲಿ ಬಡವರು ಮತ್ತು ಶ್ರೀಮಂತರ ನಡುವಿನ ಸ್ಪರ್ಧೆಯಾಗಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲಲಿದ್ದು, ರಾಜ್ಯದ ಭವಿಷ್ಯವನ್ನು ನಿರ್ಧರಿಸಲಾಗುತ್ತದೆ ಎಂದಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಬಡವರನ್ನು ಗೆಲ್ಲಿಸಿ'ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದು, ಬಿಜೆಪಿ ಬಡ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ದಾವಣಗೆರೆಯಲ್ಲಿ ಬಿಜೆಪಿ ಸಾಮಾನ್ಯ ವ್ಯಕ್ತಿಗೆ ಟಿಕೆಟ್ ನೀಡಿದರೆ, ಕಾಂಗ್ರೆಸ್ ಪ್ರಬಲ ಮತ್ತು ಪ್ರಭಾವಿಗಳಿಗೆ ಟಿಕೆಟ್ ನೀಡಿದೆ. ಬಾಗಲಕೋಟೆಯಲ್ಲಿ ಬಿಜೆಪಿ ಅಭ್ಯರ್ಥಿ ಬಗ್ಗೆ ಉತ್ತಮ ಅಭಿಪ್ರಾಯವಿದೆ ಎಂದು ತಿಳಿಸಿದರು.




ಕಾಂಗ್ರೆಸ್ ಎರಡೂ ಕಡೆ ವಂಶಾಡಳಿತ ರಾಜಕಾರಣಕ್ಕೆ ಅವಕಾಶ ನೀಡಿದ್ದು, ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲುವ ಪ್ರಬಲ ಅವಕಾಶವಿದೆ. ದಾವಣಗೆರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆದ್ದರೆ ಭವಿಷ್ಯದಲ್ಲಿ ಮುಸ್ಲಿಮರಿಗೆ ಅವಕಾಶಗಳು ಸಿಗುವುದಿಲ್ಲ ಎಂಬುದು ಅರ್ಥವಾಗಿದ್ದು, ಮುಸ್ಲಿಮರು ಕಾಂಗ್ರೆಸ್ ಪಕ್ಷವನ್ನು ವಿರೋಧಿಸುತ್ತಿದ್ದಾರೆ. ಹಿಂದುಳಿದ ವರ್ಗಗಳ ಬಗ್ಗೆ ಮಾತನಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಟಿಕೆಟ್ ನೀಡಿಲ್ಲ ಎಂದು ಆರೋಪಿಸಿದರು.

### ಹಾಲಿ ಶಾಸಕರ ನಿಧನದ ಹಿನ್ನೆಲೆ ಉಪಚುನಾವಣೆ



ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರವನ್ನು ಪ್ರತಿನಿಧಿಸಿದ್ದ ಹಾಲಿ ಕಾಂಗ್ರೆಸ್ ಶಾಸಕರಾದ ಶಾಮನೂರು ಶಿವಶಂಕರಪ್ಪ ಮತ್ತು ಎಚ್‌ವೈ ಮೇಟಿ ಅವರ ನಿಧನದ ಹಿನ್ನೆಲೆಯಲ್ಲಿ ಉಪಚುನಾವಣೆ ಅನಿ ವಾರ್ಯವಾಗಿದೆ.

### ಕಾಂಗ್ರೆಸ್ - ಬಿಜೆಪಿ ನಡುವೆ ನೇರ ಸ್ಪರ್ಧೆ



ಆಡಳಿತಾರೂಢ ಕಾಂಗ್ರೆಸ್ ದಾವಣಗೆರೆ ದಕ್ಷಿಣದಲ್ಲಿ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಮತ್ತು ಕರ್ನಾಟಕದ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ ಅವರ ಪುತ್ರ ಸಮರ್ಥ ಶಾಮನೂರು ಮತ್ತು ಬಾಗಲಕೋಟೆಯಲ್ಲಿ ಉಮೇಶ್ ಮೇಟಿ ಅವರನ್ನು ಕಣಕ್ಕಿಳಿಸಿದ್ದು, ಬಿಜೆಪಿ ಅಭ್ಯರ್ಥಿಗಳಾದ ಟಿ ದಾಸಕರಿಯಪ್ಪ ಮತ್ತು ವೀರಭದ್ರಯ್ಯ ಚರಂತಿಮಠ ಅವರೊಂದಿಗೆ ನೇರ ಸ್ಪರ್ಧೆರ್ವೇರ್ಪಟ್ಟಿದೆ.



# ಬೇಸಿಗೆಯಲ್ಲಿ ಕುಡಿವ ನೀರಿಗೆ ತೊಂದರೆಯಾಗದಿರಲಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬೇಸಿಗೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು, ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈವರೆಗೂ ಟ್ಯಾಂಕರ್ ಸರಬರಾಜು ಅವಶ್ಯಕತೆ ಕಂಡುಬಂದಿಲ್ಲ. ಆದಾಗ್ಯೂ ಸಮಸ್ಯೆ ಇರುವ ಭಾಗದಲ್ಲಿ ಕುಡಿಯುವ ನೀರಿಗೆ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು ಎಂದರು.

ಪ್ರತಿ ಗ್ರಾಪಂಗಳು ನೀರು ಪೂರೈಕೆಯಲ್ಲಿ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು. ಭವಿಷ್ಯದ ದಿನಗಳಲ್ಲಿ ಎಲ್ಲಿ ಸಮಸ್ಯೆ ಉಲ್ಬಣಿಸಬಹುದೋ ಅಲ್ಲಿ ಪರ್ಯಾಯವಾಗಿ ಜಲಮೂಲಗಳನ್ನು ಗುರುತಿಸಿಟ್ಟುಕೊಳ್ಳಬೇಕು. ಬೋರವೆಲ್ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದರು.

ಈ ಹಿಂದೆ ಕುಡಿಯುವ ನೀರಿಗೆ ಎಲ್ಲೆಲ್ಲಿ ಸಮಸ್ಯೆಯಾಗಿತ್ತು ಎಂಬ ಮಾಹಿತಿ ಇದೆ. ಅಲ್ಲಿ ಯಾವುದೇ ತೊಂದರೆಯಾಗದ ರೀತಿಯಲ್ಲಿ ತಾಲೂಕು ಮಟ್ಟದಲ್ಲಿ ಕಾಲ-ಕಾಲಕ್ಕೆ ಕಾರ್ಯಪಡೆ ಸಭೆ ನಡೆಸುವ ಮೂಲಕ ಬೇಸಿಗೆಯಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಇನ್ನೊಂದೆಡೆ ಲಭ್ಯವಿರುವ ಜಲಮೂಲಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ನೀರು ಪರೀಕ್ಷಿಸಿ, ಪೂರೈಸಲು ಕ್ರಮ ಕೈಗೊಳ್ಳಬೇಕು. ಈ ವಿಷಯದಲ್ಲಿ ಬಹು ಜಾಗೃತಿ ವಹಿಸಬೇಕು ಎಂದರು. ಒಎಚ್‌ಟಿ ನೀರು ಸಂಗ್ರಹ ಟ್ಯಾಂಕ್ ನಿರಂತರವಾಗಿ ಸ್ವಚ್ಛಗೊಳಿಸಬೇಕು. ದಾಖಲೆ ನಮೂದಿಸಿ, ನಿರ್ವಹಿಸಬೇಕು ಗ್ರಾಪಂ ಮಟ್ಟದಲ್ಲಿ ಬೋರವೆಲ್ ದುರಸ್ತಿ ತಮ್ಮ ಹಂತದಲ್ಲಿ ಮಾಡಿಕೊಳ್ಳಬೇಕು. ಈಗಾಗಲೇ ಸಾಕಷ್ಟು ಸೂಚನೆಗಳನ್ನು ನೀಡಲಾಗಿದೆ. ಬೋರವೆಲ್ ದುರಸ್ತಿ ಮಾಡಿಸದೇ ನಿರ್ಲಕ್ಷ್ಯ ವಹಿಸಬಾರದು. ಮುಂಚಿತವಾಗಿ ತಿಳಿದುಕೊಳ್ಳಬೇಕು ಎಂದರು.

**ವಿಜಯಪುರದಲ್ಲಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚನೆ**

ಗ್ರಾಮ ಪಂಚಾಯತಿ, ಸ್ಥಳೀಯ ಸಂಸ್ಥೆಗಳ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎಂದೂ ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದ ಅವರು, ಎಲ್ಲಿಯೂ ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಬಿಸಿಲಿನ ತಾಪಮಾನದಿಂದಾಗುವ ಪರಿಣಾಮಗಳ ಬಗ್ಗೆ ಜನರು ವಹಿಸಬೇಕಾದ ಅಗತ್ಯ ಮುನ್ನೆಚ್ಚರಿಕೆ ಬಗ್ಗೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಇದೇ ವೇಳೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ, ಎಲ್ಲ ತಾಲೂಕಿನ ತಹಶೀಲ್ದಾರರು, ತಾಲೂಕ ಪಂಚಾಯತಿ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹತ್ವಾಕಾಂಕ್ಷೆಯ ಜಲಧಾರೆ ಯೋಜನೆ ಅನುಷ್ಠಾನದಲ್ಲಿ ವಿಳಂಬ ಸಲ್ಲದು

## ತ್ವರಿತ ಯೋಜನೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಡಿಸಿ ಡಾ.ಆನಂದ್ ಕೆ. ಎಚ್ಚರಿಕೆ । ಜಲಧಾರೆ ಯೋಜನೆ ಅನುಷ್ಠಾನಕ್ಕೆ ವಿಶೇಷ ಸಭೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಲಧಾರೆ ಯೋಜನೆ ಅನುಷ್ಠಾನದಲ್ಲಿ ವಿಳಂಬ ಸಲ್ಲದು. ಬೇರೆ ಬೇರೆ ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡುವ ಮೂಲಕ ಯೋಜನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಲಧಾರೆ ಯೋಜನೆ ಕುರಿತು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದರು.

ಆಲಮಟ್ಟಿ ಹಾಗೂ ನಾರಾಯಣಪುರ ಹಿನ್ನೀರಿನ ಮೂಲಕ ನೀರು ಪೂರೈಸುವ ಮಹತ್ವಾಕಾಂಕ್ಷೆಯ ಈ ಯೋಜನೆ ನಮ್ಮ ಜಿಲ್ಲೆಗೆ ವರದಾನವಾಗಿದೆ. ಯೋಜನೆ ಅನುಷ್ಠಾನದಲ್ಲಿ ವಿಳಂಬ ಸಲ್ಲದು ಎಂದರು.

ಈ ಯೋಜನೆ ಅನುಷ್ಠಾನ ಪ್ರಕ್ರಿಯೆಯಲ್ಲಿ ವಿಳಂಬವಾಗಿದ್ದು, ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಯೋಜನೆ ಪೂರ್ಣಗೊಳಿಸಬೇಕು ಎಂದರು.

ಯೋಜನೆ ಅನುಷ್ಠಾನಕ್ಕೆ ಅನುದಾನದ ಕೊರತೆ ಇಲ್ಲ. ಸಮಸ್ಯೆ ಎಲ್ಲಿದೆ ಗುರುತಿಸಿ, ಜಾಗ ಗುರುತಿಸುವಿಕೆ ಪೈಪ್ ಲೈನ್ ಅಳವಡಿಸಲು ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದರು.

43 ಸೈಟ್ ನಲ್ಲಿ ಸಮಸ್ಯೆ ಇದೆ. 35ಕಿ.ಮೀ ಪೈಪ್ ಲೈನ್ ಮಾಡಲು ಅಧಿಕಾರಿಗಳು ಒಗ್ಗಟ್ಟಾಗಿ ಕಾರ್ಯ ನಿರ್ವಹಿಸಬೇಕು ಎಂದರು. ತಹಸೀಲ್ದಾರ್ ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಉದ್ಭವಿಸುವ ತಾಂತ್ರಿಕ ಸಮಸ್ಯೆ ನಿವಾರಿಸಿಕೊಂಡು ಸುಗಮವಾಗಿ ಯೋಜನೆ ಅನುಷ್ಠಾನಕ್ಕೆ ಸಹಕರಿಸಬೇಕು. ಈ ಮಹತ್ವದ ಕುಡಿಯುವ ನೀರಿನ ಯೋಜನೆ ಅನುಷ್ಠಾನ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಬಾರದು ಸೂಚಿಸಿದರು.




ಅರಣ್ಯ ಭೂಮಿ ಸಮಸ್ಯೆ ನಿವಾರಿಸಿಕೊಂಡು ಕಾಮಗಾರಿಗೆ ವೇಗದ ಸ್ಪರ್ಶ ನೀಡಿ, ತಕ್ಷಣ ಯೋಜನೆ ಹಸ್ತಾಂತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಡಿಎಫ್‌ಒ ಅವರು ಎರಡು ಪ್ರಸ್ತಾವನೆ ಸರ್ಕಾರಕ್ಕೆ ಕಳಿಸಿದ್ದು. 4ಕಿ.ಮೀ ಅರಣ್ಯ ಇಲಾಖೆಯ ಸಮಸ್ಯೆಯನ್ನು ಅರಣ್ಯ ಇಲಾಖೆಯವರು ಬಗೆಹರಿಸಿಕೊಳ್ಳಬೇಕು ಎಂದರು.

ಜಲಧಾರೆ ಯೋಜನೆಯ ಹಂತ.1ರ ಕಾಮಗಾರಿ ಬಹುಮುಖ್ಯವಾಗಿದೆ. ಈ ಯೋಜನೆ ಬೇಗ ಪೂರ್ಣಗೊಳಿಸಲು ಸೂಚಿಸಿದರು.

ಈ ಕಾಮಗಾರಿಗೆ ಸಂಬಂಧಿಸಿದಂತೆ ವಿದ್ಯುತ್ ಸಮಸ್ಯೆಯನ್ನು ಹೆಸ್ಕಾಂ ಅಧಿಕಾರಿಗಳು ತಕ್ಷಣ ಬಗೆಹರಿಸಬೇಕು.

ಕೆಪಿಟಿಸಿಎಲ್, ಹೆಸ್ಕಾಂ ಕುಡಿಯುವ ನೀರು ಸರಬರಾಜು ಹಾಗೂ ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಪ್ರತ್ಯೇಕ ಸಭೆ ನಡೆಸಿ, ಈ ಯೋಜನೆಯ ನೀರು ಶುದ್ಧೀಕರಣ ಘಟಕಕ್ಕೆ ಮೋಟಾರ್ಸ್ ಪಂಪಿಂಗ್ ವಿದ್ಯುತ್ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಎಲ್ಲರೂ ಸಂಪರ್ಕ ಹಾಗೂ ಸಂವಹನ ಸಾಧಿಸಿ ಬಗೆಹರಿಸಿಕೊಂಡು ಬಹುಪಯೋಗಿ ಶುದ್ಧ ಕುಡಿಯುವ ನೀರೊದಗಿಸುವ ಈ ಯೋಜನೆ ಜಿಲ್ಲೆಯ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಈ ಯೋಜನೆಯಿಂದ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿದೆ. ಕಾಮಗಾರಿ ಅನುಷ್ಠಾನಕ್ಕೆ ಎದುರಾಗುವ ಎಲ್ಲ ಅಡತಡೆಗಳನ್ನು ನಿವಾರಿಸಿಕೊಂಡು ಕಾರ್ಯನಿರ್ವಹಿಸಬೇಕು ಒಂದು ವೇಳೆ ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವವರ ವಿರುದ್ಧ ಕ್ರಮ ಕೈಕೊಳ್ಳಲಾಗುವುದು ಎಂಬುದಾಗಿ ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಮಾತನಾಡಿ, ಗ್ರಾಮದ ಒಎಚ್‌ಟಿ ನೀರಿನ ಟ್ಯಾಂಕ್ ಇದ್ದಲ್ಲಿ ಗ್ರಾಪಂ ವ್ಯಾಪ್ತಿಯ ಅಧಿಕಾರಿಗಳು ಹಾಗೂ ಇಒ ಗಳು ಒಎಸ್ ಟಿ ಲ್ಯಾಂಡ್ ಸಮಸ್ಯೆಯನ್ನು ಮುಂಬರುವ ಸಭೆಯೊಳಗಾಗಿ ಪೂರ್ಣಗೊಳಿಸಬೇಕು ಎಂದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಲ್ಲಿನ ಈ ಯೋಜನೆಗೆ ಸಂಬಂಧಿಸಿದ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಈ ಯೋಜನೆ ಸ್ಥಳೀಯ ಸಂಸ್ಥೆಯ ವ್ಯಾಪ್ತಿಗೂ ಒಳಪಡಲಿದ್ದು, ಅಲ್ಲಿ ಉದ್ಭವಿಸುವ ಸಮಸ್ಯೆಗಳನ್ನು ಸ್ಥಳೀಯ ಮಟ್ಟದಲ್ಲಿ ನಿವಾರಿಸಿಕೊಡಲು ಅಧಿಕಾರಿಗಳು ಗಮನಹರಿಸಬೇಕು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ, ಎಲ್ಲ ತಾಲೂಕಿನ ತಹಶೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಾ. ಜಯಶ್ರೀ ಪಟ್ಟಣ ಅವರಿಗೆ ಆನಂದ ಕಂದ ಪ್ರಶಸ್ತಿ

## ಕನ್ನಡ-ಮರಾಠಿ ಭಾಷಾ ಬಾಂಧವ್ಯ ಬೆಳೆಸಿ, ಬಲಪಡಿಸಲೆಂದು ಈ ಪ್ರತಿಷ್ಟಿತ ಪ್ರಶಸ್ತಿ । "ಉದಯರಶ್ಮಿ" ಬಳಗದ ಅಭಿನಂದನೆ

■ ಉದಯರಶ್ಮಿ ದಿನಪತ್ರಿಕೆ


ಧಾರವಾಡ: ಕನ್ನಡ ಮರಾಠಿ ಭಾಷಾ ಬಾಂಧವ್ಯ ಬೆಳೆಸಲೆಂದು ಬಲಪಡಿಸಲೆಂದು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಿಂದ ಕೊಡ ಮಾಡಿದ

ಡಾ ಪಂಡಿತ ಅವಳೀಕರ ಅವರ ದತ್ತಿ ಪ್ರಶಸ್ತಿ ಆನಂದ ಕಂದ 2026 ಈ ಭಾರಿ ಡಾ ಜಯಶ್ರೀ ಶಶಿಕಾಂತ ಪಟ್ಟಣ ರಾಮದುರ್ಗ ಪುಣೆ ಇವರಿಗೆ ದೊರೆತಿದೆ.

ಕನ್ನಡ ಸಾಹಿತ್ಯದ ಕವಿ ಶ್ರೇಷ್ಠ ಸಾಹಿತಿ ಡಾ ಬೆಟಗೇರಿ ಕೃಷ್ಣ ಶರ್ಮಾ ಅವರ ಹೆಸರಿನಲ್ಲಿ ಈ ಪ್ರಶಸ್ತಿಯನ್ನು 2000 ರಿಂದ ಕರ್ನಾಟಕ ವಿದ್ಯಾವರ್ಧಕ ಸಂಘ ಕನ್ನಡದಿಂದ ಮರಾಠಿಗೆ ಮರಾಠಿಯಿಂದ ಕನ್ನಡಕ್ಕೆ ಭಾಷಾಂತರ ಅನುವಾದ ಮತ್ತು ಸಾಹಿತ್ಯ ರಚನೆ ಮಾಡುವ ಎರಡೂ ಭಾಷೆಯ ಮಧ್ಯೆ ಬಾಂಧವ್ಯ ಸಾಮರಸ್ಯ ತರುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಮಹಾರಾಷ್ಟದ ಸಾಹಿತಿಗಳಿಗೆ ಈ ಪ್ರಶಸ್ತಿಯನ್ನು ನೀಡಲಾಗುವುದು.

ಡಾ ಗುರುಲಿಂಗ ಕಾಪಸೆ ಹಿಂದಿನ ಕೇಂದ್ರ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಿಗೆ ಮೊದಲ ಆನಂದ ಕಂದ ಪ್ರಶಸ್ತಿ ದೊರೆತಿತ್ತು. ತದನಂತರ ಕರ್ನಾಟಕದ ಅನೇಕ ಹಿರಿಯ ಸಾಹಿತ್ಯ ದಿಗ್ಗಜರಿಗೆ ಈ ಪ್ರಶಸ್ತಿಯನ್ನು ಕರ್ನಾಟಕ ವಿದ್ಯಾವರ್ಧಕ ಸಂಘ ಧಾರವಾಡ ನೀಡುತ್ತ ಬಂದಿದೆ.

ಡಾ ಜಯಶ್ರೀ ಶಶಿಕಾಂತ ಪಟ್ಟಣ ಇವರು ಕರ್ನಾಟಕದ ಮೇರು ಸಾಹಿತಿಗಳನ್ನು ಸ್ವಾತಂತ್ರ್ಯ ಹೋರಾಟಗಾರರನ್ನು ಗಡಿನಾಡು ಸೋಲಾಪುರ ಜತ್ತ



ಅಕ್ಕಲಕೋಟ ಭಾರ್ಸಿ ಮುಂತಾದ ಭಾಗಗಳ ಅನೇಕ ದಾನಿ ದಾಸೋಹಿಗಳ ಪುಣ್ಯ ಪುರುಷರ ಪರಿಚಯವನ್ನು ಮರಾಠಿಯಲ್ಲಿ ಲೇಖನ ಪುಸ್ತಕಗಳ ಮೂಲಕ ಸಾಹಿತ್ಯ ರಚಿಸಿ ಮಹಾರಾಷ್ಟ್ರದ ಜನರಿಗೆ ಕನ್ನಡಿಗರ ಚರಿತ್ರೆಯನ್ನು ಪ್ರಕಟ ಮಾಡಿದ್ದಾರೆ. ಬಸವ ಸಮಿತಿಯ ಮರಾಠಿ ದ್ವೈ ಮಾಸಿಕ ಪತ್ರಿಕೆಯಲ್ಲಿ ಹತ್ತಾರು ಮರಾಠಿ ಲೇಖನಗಳನ್ನು ಸಿದ್ದ ಪಡಿಸಿ ಪ್ರಕಟ ಮಾಡಿದ್ದಾರೆ.

ದಲಿತ ಕವಿ ಸಿದ್ದಲಿಂಗಯ್ಯ ಅವರ ದೊಡ್ಡ ಗೌಡರ ಬಾಗಿಲಿಗೆ ನಮ್ಮ ಎಲುಬಿನ ತೋರಣ ಎಂಬ ಕವನವನ್ನು ಮರಾಠಿಗೆ ತರ್ಜುಮೆ ಮಾಡಿದ್ದಾರೆ. ಪ್ರೊ ಎಸ್ ಜಿ ಸಿದ್ದರಾಮಯ್ಯ ಅವರ ಕನ್ನಡದ ಲಿಂಗಾಯತ ಧರ್ಮ ಎನ್ನುವ ಮಹತ್ತರ ಕೃತಿಯನ್ನು ಮರಾಠಿಗೆ ಅನುವಾದ ಮಾಡಿದ್ದಾರೆ. ಕಳೆದ ಆರು ವರ್ಷಗಳಿಂದ ಅಂತರಜಾಲ ಗೂಗಲ್ ಮೀಟ್ ಮಾಡುವ ಮೂಲಕ ಕನ್ನಡದ ಶರಣರನ್ನು ಸಂತರನ್ನು ಮಹಾರಾಷ್ಟದ ಜನತೆಗೆ ಮರಾಠಿ ಹಿಂದಿ ಇಂಗ್ಲಿಷ್ ಭಾಷೆಗಳಲ್ಲಿ ಉಪನ್ಯಾಸ ಏರ್ಪಡಿಸಿ ಕನ್ನಡದ ಕಂಪನ್ನು ಮಹಾರಾಷ್ಟದ ಜನತೆಗೆ ಉಣ ಬಡಿಸಿದ್ದಾರೆ. ಡಾ ಜಯಶ್ರೀ ಶಶಿಕಾಂತ ಪಟ್ಟಣ ಮೂಲತಃ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಅರಹಟ್ಟಿ ಎಂಬ ಪುಟ್ಟ ಗ್ರಾಮದವರಾದ ಲಿಂಗೈಕ್ಯ ಶ್ರೀ ಶ್ರೀಶೈಲಪ್ಪ ಅಂಗಡಿ ಇವರ ಹಿರಿಯ ಮಗಳು. ಲಿಂಗೈಕ್ಯ ಶ್ರೀ ಶ್ರೀಶೈಲಪ್ಪ ಅಂಗಡಿ ಇವರು ಮಹಾರಾಷ್ಟದ ನಾಸಿಕನಲ್ಲಿ ಎಕ್ಸಿಕ್ಯೂಟಿವ್ ಇಂಜಿನಿಯರ್ ಆಗಿದ್ದರು. ಹೀಗಾಗಿ ಜಯಶ್ರೀ ಅಂಗಡಿ ನಾಸಿಕದಲ್ಲಿ ಹುಟ್ಟಿದರು. ತಾಯಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿ ಗ್ರಾಮದ ಕಡಕೋಳ ಮನೆತನದವರು. ಶರಣೆ ವಿಜಯಾ ಅಂಗಡಿ ಇವರು ತಮ್ಮ ಎಲ್ಲಾ ಮಕ್ಕಳಿಗೆ ಶರಣ ಸಂಸ್ಕೃತಿ ಕನ್ನಡ ಸಾಹಿತ್ಯ ಪರಿಚಯ ಮಾಡಿ ಕೊಟ್ಟವರು.

ಡಾ ಜಯಶ್ರೀ ಅಂಗಡಿ ತಮ್ಮ ಪದವಿ ಸ್ನಾತ್ತಕೋತ್ತರ ಮತ್ತು ಪಿ ಎಚ್ ಡಿ ಪದವಿಯನ್ನು ಪುಣೆಯ ವಿಶ್ವ ವಿದ್ಯಾಲಯದಿಂದ ಪಡೆದರು.

ಮುಂದೆ ಬೆಳಗಾವಿ ಜಿಲ್ಲೆಯ ರಾಮದುರ್ಗದ ಡಾ ಶಶಿಕಾಂತ ಪಟ್ಟಣ ಇವರನ್ನು ಮದುವೆಯಾದ ಮೇಲೆ 15 ವರ್ಷ ಬೆಳಗಾವಿಯಲ್ಲಿ ಹೈ ಟೆಕ್ ಡೈಗ್ನೊಸ್ಟಿಕ್ ಸೆಂಟರ್ ನಲ್ಲಿ ಮೈಕ್ರೊ ಬಾಯಾಲೋಜಿಸ್ಟ್ ಆಗಿ ಕಾರ್ಯ ನಿರ್ವಹಿಸಿದರು .ಕೆ ಎಲ್ ಇ ಇಂಜಿನಿಯರಿಂಗ್ ಕಾಲೇಜು ಮತ್ತು ಪುಣೆಯ ಡಿ ವೈ ಪಾಟೀಲ್ ಕಾಲೇಜಿನಲ್ಲಿ ಹತ್ತು ವರ್ಷಗಳ ಬೋಧನೆ ಮಾಡಿದ್ದಾರೆ.

ಮರಾಠಿಯಿಂದ ಕನ್ನಡಕ್ಕೆ ಮೂರು ಕೃತಿಗಳನ್ನು ರಚಿಸಿ ಸಂಪಾದಿಸಿದ್ದಾರೆ. ತಮ್ಮ ಪತಿ ಡಾ ಶಶಿಕಾಂತ ಪಟ್ಟಣ ಇವರ ಜೊತೆಗೂಡಿ ಅಕ್ಕನ ಅರಿವು ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಪುಣೆ ಇದರ ಮೂಲಕ ಕರ್ನಾಟಕ ಮಹಾರಾಷ್ಟ್ರ ಮತ್ತು ರಾಷ್ಟ್ರ ಜಗತ್ತಿನಾದ್ಯಂತ ಬಸವ ತತ್ವ ಪ್ರಸಾರ ಮಾಡುವ ಕೈಂಕರ್ಯಕ್ಕೆ ನಿಂತಿದ್ದಾರೆ.

**ಇವರಿಗೆ ಒಬ್ಬ ಮಗನಿದ್ದಾನೆ**

ಡಾ ಜಯಶ್ರೀ ಶಶಿಕಾಂತ ಪಟ್ಟಣ ಇವರಿಗೆ ದಿನಾಂಕ 16 ಏಪ್ರಿಲ್ 2026 ರಂದು ಸಂಜೆ 6 ಗಂಟೆಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ರಾ ಹ ದೇಶಪಾಂಡೆ ಸಭಾ ಭವನದಲ್ಲಿ ಶ್ರೀ ಚಂದ್ರಕಾಂತ ಬೆಲ್ಲದ ಅವರ ಅಧ್ಯಕ್ಷತೆಯಲ್ಲಿ ಡಾ ರಾಘವೇಂದ್ರ ಪಾಟೀಲ ಖ್ಯಾತ ಸಾಹಿತಿಗಳು ಪ್ರಶಸ್ತಿ ಪ್ರದಾನ ಮಾಡುವರು. ಡಾ ಬೆಟಗೇರಿ ಕೃಷ್ಣ ಶರ್ಮಾ ಸ್ಮಾರಕ ಟ್ರಸ್ಟ್ ಬೆಳಗಾವಿ ಇದರ ಅಧ್ಯಕ್ಷರಾದ ಡಾ ವಿನಯಾ ಒಕ್ಕುಂದ ಇವರು ಅತಿಥಿಗಳಾಗಿ ಆಗಮಿಸುವರು.

ಧಾರವಾಡದ ಆನಂದ ಕಂದರ ಗೆಳೆಯರ ಬಳಗ ಆನಂದ ಕಂದರ ಗೀತಗಾಯನ ಪ್ರದರ್ಶನ ಮಾಡಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡ ಮತ್ತು ಡಾ ಬೆಟಗೇರಿ ಕೃಷ್ಣ ಶರ್ಮಾ ಅವರ ಅಭಿಮಾನಿಗಳು ಈ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳಬೇಕೆಂದು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶ್ರೀ ಶಂಕರ ಹಲಗತ್ತಿ ಅವರು ತಿಳಿಸಿದ್ದಾರೆ.

### "ಉದಯರಶ್ಮಿ" ಬಳಗದ ಅಭಿನಂದನೆ



ಜಗತ್ತಿನಾದ್ಯಂತ ಬಸವ ತತ್ವ ಪ್ರಸಾರ ಮಾಡುವ ಕೈಂಕರ್ಯಕ್ಕೆ ಟೊಂಕಕಟ್ಟಿ ನಿಂತಿರುವ ಡಾ.ಜಯಶ್ರೀ ಶಶಿಕಾಂತ ಪಟ್ಟಣ ಇವರಿಗೆ ಪ್ರತಿಷ್ಠಿತ "ಆನಂದ ಕಂದ" ಪ್ರಶಸ್ತಿ ದೊರೆತಿರುವುದನ್ನು ಸ್ವಾಗತಿಸಿದ "ಉದಯರಶ್ಮಿ" ದಿನಪತ್ರಿಕೆ ಸಂಪಾದಕ ಇಂದುಶೇಖರ ಮಣೂರ ಮತ್ತು ಪ್ರಕಾಶಕಿ ಶ್ರೀಮತಿ ಶೈಲಾ ಮಣೂರ ಸೇರಿದಂತೆ ಪತ್ರಿಕಾ ಬಳಗ ಅಭಿನಂದನೆ ಸಲ್ಲಿಸಿದ್ದಾರೆ.

# ನಾಡು-ದೇಶದ ಹಿತಕ್ಕಾಗಿ ಹಗಲಿರುಳು ಶ್ರಮಿಸುವ ಬಿಜೆಪಿ : ಬೆಳ್ಳುಬ್ಬಿ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಸೈದ್ಧಾಂತಿಕ ನೆಲೆಗಟ್ಟಿನ ಮೇಲೆ ಭಾರತೀಯ ಜನತಾ ಪಕ್ಷವನ್ನು ಕಟ್ಟಿದ ಹಿರಿಯರ ಮಾರ್ಗದರ್ಶನದಲ್ಲಿ ನಾವುಗಳು ಪಕ್ಷವನ್ನು ಇನ್ನಷ್ಟು ಗಟ್ಟಿಗೊಳಿಸಬೇಕಾಗಿದೆ ಎಂದು ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಹೇಳಿದರು.

ಪಟ್ಟಣದ ದ್ಯಾಮವ್ವ ದೇವಿ ದೇವಸ್ಥಾನದ ಸಭಾಂಗಣದಲ್ಲಿ ನಡೆದ ಭಾರತೀಯ ಜನತಾ ಪಕ್ಷದ 46ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜ ಸೇವೆಯ ಗುರಿಯನ್ನು ಹೊಂದಿಕೊಂಡು ಜನರ ಅಭ್ಯುದಯಕ್ಕಾಗಿ, ನಾಡು-ದೇಶದ ಹಿತಕ್ಕಾಗಿ ಹಗಲಿರುಳು ಶ್ರಮಿಸುವ ಹಿರಿಯರು ಹಾಗೂ ಯುವಕರ ಸಮ್ಮಿಲನದಿಂದ ಕೂಡಿದ ಕಾರ್ಯಕರ್ತರನ್ನು ಹೊಂದಿರುವ ಪಕ್ಷವೇ ಬಿಜೆಪಿ ಎಂದು ಹೇಳಿದರು. ಸಮಗ್ರದೃಷ್ಟಿಕೋನವನ್ನು ಮನಗಂಡು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕುವಂತೆ ಕಾರ್ಯನಿರ್ವಹಿಸಿ, ರಾಜಕೀಯ ಕ್ಷೇತ್ರದಲ್ಲಿ ಪಕ್ಷವನ್ನು ಬಲಿಷ್ಠವಾಗಿ ಕಟ್ಟಲು ಯುವಕರು ಮುಂದಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಕ್ಷವನ್ನು ಕಟ್ಟಿದ ಹಿರಿಯರನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮುಖಂಡರಾದ ಮಲ್ಲಿಕಾರ್ಜುನ ದೇವರಮನಿ, ಜಗದೀಶ ಸುನಗದ, ಚಂದ್ರಶೇಖರಯ್ಯ ಗಣಕುಮಾರ, ಚಂದ್ರಶೇಖರ ಬೆಳ್ಳುಬ್ಬಿ, ಪಟ್ಟಣ ಪಂಚಾಯತ್ ಸದಸ್ಯ ಬಾಬು ಭಜಂತ್ರಿ, ಅಮೀನಪ್ಪ ತೆಗ್ಗಿ, ವಿಜಯಕುಮಾರ ಕೊಟ್ಟಗಿ, ಡೋಂಗ್ರಿ ಕಟಬರ, ನಾಮದೇವ ಪವಾರ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತ-ರಿದ್ದರು. ಪೂಜೆ ಸಹ ನೆರವೇರಿಸಲಾಯಿತು.

ಇದೇ ಸಂದರ್ಭದಲ್ಲಿ ಕೊಲ್ಹಾರ ಪಟ್ಟಣಕ್ಕೆ ಆಗಮಿಸಿದ ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಅವರನ್ನು ಸನ್ಮಾನಿಸಲಾಯಿತು.

# ಅಶ್ವಿನಿ & ದೀಪಾ ಅವರಿಗೆ ಸಾವಿತ್ರಿಬಾಯಿ ಪುಲೆ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ





ಅಥಣಿ: ತಾಲೂಕಿನ ನದಿ ಇಂಗಳಗಾಂವ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಸಹ ಶಿಕ್ಷಕಿಯರಾದ ಶ್ರೀಮತಿ ಅಶ್ವಿನಿ ಬಿಸ್ವಾಗರ ಹತ್ತು ವರ್ಷ ಸೇವೆ ಹಾಗೂ ಶ್ರೀಮತಿ ದೀಪಾ ಹೊಸಮಠ ಅವರ ಹದಿನೆಂಟು ವರ್ಷಗಳ ಸೇವೆಯನ್ನು ಪರಿಗಣಿಸಿ ಜಿಲ್ಲಾ ಮಟ್ಟದ ಸಾವಿತ್ರಿಬಾಯಿ ಪುಲೆ ಅನುಪಮಾ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಇತ್ತೀಚಿಗೆ ಅಥಣಿ ಪಟ್ಟಣದ ರಾಯಲ್ ಫಂಕ್ಷನ್ ಹಾಲನಲ್ಲಿ ನಡೆದ ಕರ್ನಾಟಕ ರಾಜ್ಯ ಪ್ರಾಥ-ಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರು ಹಾಗೂ ಚಿಕ್ಕೋಡಿ ಜಿಲ್ಲೆ ಅಥಣಿ ಘಟಕದ ವತಿಯಿಂದ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಮಾತೆ ಸಾವಿತ್ರಿಬಾಯಿ ಪುಲೆಯವರ ಜಯಂತಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗಿದೆ.

# ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳಲು ಮನವಿ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳ 2026-27ನೇ ಸಾಲಿನ ಶೈಕ್ಷಣಿಕ ವರ್ಷದ 6ನೇ ತರಗತಿ ಪ್ರವೇಶಾತಿ ಪ್ರವೇಶ ಪತ್ರಗಳನ್ನು ಬಿಡುಗೊಳಿಸಲಾಗಿದೆ.

ಏ.12ರಂದು ಪ್ರವೇಶ ಪರೀಕ್ಷೆಗಳು ನಡೆಯಲಿವೆ. ಪ್ರವೇಶ ಪತ್ರಗಳನ್ನು ಅಲ್ಪಸಂಖ್ಯಾತರ : Website :https://erp.dom.karnataka.gov.in/adm/Admission/studentHallticket ನಿಂದ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ.

ಪ್ರತಿ ವಿದ್ಯಾರ್ಥಿಯ ಮೊಬೈಲ್ ಸಂಖ್ಯೆಗೂ ಕೂಡಾ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣಾ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳ ಕಛೇರಿ, ಮೌಲಾನಾ ಆಜಾದ ಭವನ, ಜಿಲ್ಲಾ ಪಂಚಾಯತ ರಸ್ತೆ, ಕನಕದಾಸ ಬಡಾವಣೆ, ವಿಜಯಪುರ-586109, ದೂರವಾಣಿ ಸಂಖ್ಯೆ :08352-295523 ಸಂಪರ್ಕಿಸಬಹುದಾಗಿದೆ ಎಂದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.8 ರಂದು ಸಚಿವ ಎಂ.ಬಿ.ಪಾಟೀಲ ಪ್ರವಾಸ ವಿವರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ದಿ.8 ಬುಧವಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆ.12.30ಗಂ. ವಿಜಯಪುರ ಜಿಲ್ಲಾ ಪಂಚಾಯತ ಕಾರ್ಯಾಲಯ ಆವರಣದಲ್ಲಿ ಪವರ ಗ್ರೀಡ್ ಸಿ.ಎಸ್.ಆರ್ ಅನುದಾನಡಿ ಆರೋಗ್ಯ ಇಲಾಖೆ ಸಲಕರಣೆಗಳು, ಶಿಕ್ಷಣ ಇಲಾಖೆಗೆ 2500 ಮೇಜುಗಳ ವಿತರಿಸಲಿದ್ದಾರೆ. ನಂತರ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣಕ್ಕೆ ಲೈಟಿಂಗ್ ವ್ಯವಸ್ಥೆ ಅಳವಡಿಕೆ, ಪ್ರವಾಸೋದ್ಯಮ ಇಲಾಖೆ ಎಸ್.ಸಿ.ಪಿ/ಟಿ..ಎಸ್.ಪಿ ಯೋಜನೆಯಡಿ ಆರು ಫಲಾನುಭವಿಗಳಿಗೆ ಮೊಬೈಲ್ ಕ್ಯಾಂಟಿನ್, ಜಿಲ್ಲಾ ಪಂಚಾಯಿತಿಯ ನಿರ್ಬಂಧಿತ ಅನುದಾನದಡಿ ಮೀಸಲಿಟ್ಟ 33ಲಕ್ಷ ರೂ. ಅನುದಾನದಲ್ಲಿ ವಿಕಲಚೇತನರಿಗಾಗಿ ಸಾಧನ ಸಲಕರಣೆ ಹಾಗೂ ಶಿಕ್ಷಣ ಇಲಾಖೆಯ ಅಗತ್ಯ ಸಾಮಗ್ರಿ ಖರೀದಿ ಅನುದಾನದಡಿ ರೂಪಾಯಿ 40 ಲಕ್ಷ ರೂ. ಅನುದಾನದಲ್ಲಿ 20 ಹೈಸ್ಕೂಲ್‌ಗಳಿಗೆ ಸ್ಮಾರ್ಟ್ ಕ್ಲಾಸ್ ಉಪಕರಣಗಳನ್ನು ವಿತ-ರಿಸಲಿದ್ದಾರೆ. ನಂತರ ಮ. 1.30ಗಂ. ಧನರ್ಗಿ ಗ್ರಾಮದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಶಾದಿಮಹಲ್ ಕಟ್ಟಡ ಉದ್ಘಾಟಿಸಲಿದ್ದಾರೆ ಎಂದು ಸಚಿವ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಹಣಮಂತ ಸುಣಗಾರ ಗೆ ತಳವಾರ ಸಮಾಜದಿಂದ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸಮಾಜದ ಹಿರಿಯ ವ್ಯಕ್ತಿಯನ್ನು ಗುರುತಿಸಿ ನಗರ ಯೋಜನಾ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಆಯ್ಕೆ ಮಾಡಿದ ಸರಕಾರಕ್ಕೆ ಮತ್ತು ಸಿಂದಗಿ ಶಾಸಕರಿಗೆ ಅಭಿನಂದನೆಗಳು ಎಂದು ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಶಿವಾಜಿ ಮೇಟಗಾರ ಹೇಳಿದರು.

ಸಿಂದಗಿ ನಗರದ ಮರಗಮ್ಮ ಲಕ್ಕಮ್ಮ ದೇವಸ್ಥಾನದಲ್ಲಿ ನೂತನವಾಗಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾಗಿ ಆಯ್ಕೆಯಾದ ಹಣಮಂತ ಸುಣಗಾರ ಅವರಿಗೆ ತಳವಾರ ಸಮಾಜದ ವತಿಯಿಂದ ಹಮ್ಮಿಕೊಂಡ ಸನ್ಮಾನಿಸಿ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಾಧನೆ ಮಾಡಿದ ಸಾಧಕ-ರಿಗೆ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸುವ ಕಾರ್ಯ ಶ್ಲಾಘನೀಯ ಎಂದರು.

ಈ ವೇಳೆ ಸನ್ಮಾನವನ್ನು ಸ್ವೀಕರಿಸಿದ ನೂತನ ಅಧ್ಯಕ್ಷ ಹಣಮಂತ ಸುಣಗಾರ ಮಾತನಾಡಿ, ಪಕ್ಷ ಹಾಗೂ ಸಮಾಜಕ್ಕೆ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಪಕ್ಷದ ಹಿರಿಯರು, ಸಿಎಂ, ಡಿಸಿಎಂ ಹಾಗೂ ಸಚಿವರು ನನ್ನನ್ನು ಈ ಹುದ್ದೆಗೆ ನೇಮಕವಾಗಲು ಸಹಕರಿಸಿದ್ದಾರೆ. ಹಿರಿಯರು ಹಾಗೂ ಸಾರ್ವಜನಿಕರು ಇಟ್ಟಿರುವ ಭರವಸೆಗೆ ಚ್ಯುತಿ ಬಾರದಂತೆ ನಗರದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಈ ವೇಳೆ ಎಸ್.ಎಂ.ಬಿರಾದಾರ, ಭೀಮರಾಯ ಯಾತನೂರ, ಪರಶುರಾಮ ಗೂಳುರ, ಶರಣಪ್ಪ ಸುಂಗಠಾಣ, ಲಕ್ಕಮ್ಮ ಬಿರಾದಾರ, ರವಿ ವಾಲೀಕಾರ, ಬಸು ಪಡಗಾನೂರ, ಶ್ರೀಶೈಲ ಹೂರಕ್ಕೆರಿ, ರಾಜು ಕುರಿ ಸೇರಿದಂತೆ ಸಮಾಜದ ಮುಖಂಡರು ಇದ್ದರು.

# ಸರಾಫ ವರ್ತಕರ ಮೇಲೆ ಪೊಲೀಸ್ ಕಿರುಕುಳ ಖಂಡಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಪಟ್ಟಣದ ಅಮಾಯಕ ಸರಾಫ ವರ್ತಕರಿಗೆ ಇತ್ತೀಚಿನ ದಿನಗಳಲ್ಲಿ ಪೊಲೀಸರ ಕಿರುಕುಳ ಹೆಚ್ಚಾಗಿದ್ದು, ಅದನ್ನು ಕೂಡಲೇ ನಿಲ್ಲಿಸಬೇಕು ಎಂದು ಆಗ್ರಹಿಸಿ ಸರಾಫ್ ವರ್ತಕರ ಸಂಘದ ಸದಸ್ಯರು ಚಡಚಣ ಉಪತಹಶೀಲದಾರ ಹುಸನಪ್ಪ ಹೊಸಮನಿ ಅವರಿಗೆ ಸೋಮವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರವೇ ತಾಲೂಕಾಧ್ಯಕ್ಷ ಸೋಮಶೇಖರ ಕಂಬಾರ ಮಾತನಾಡಿ, ಪಟ್ಟಣವು ಮಹಾರಾಷ್ಟ್ರದ ಗಡಿ ಭಾಗದಲ್ಲಿ ಇದ್ದು, ಆ ರಾಜ್ಯದ ಕಳ್ಳರು ಯಾವುದೋ ಸ್ಥಳದಲ್ಲಿ ಬಂಗಾರವನ್ನು ಕಳವು ಮಾಡಿ ಅದನ್ನು ಎಲ್ಲಿ ಮಾರಾಟ ಮಾಡಿರುತ್ತಾರೆ ಎಂಬುದು ನಮಗೆ ಗೊತ್ತಿರುವದಿಲ್ಲ. ಆದರೆ, ಯಾವುದೇ ಪೊಲೀಸರು ಕಳ್ಳರೊಂದಿಗೆ ಏಕಾ ಏಕಿ ಬಂದು ಕಳ್ಳರು ತೋರಿಸಿದ ಅಂಗಡಿಗೆ ನುಗ್ಗಿ ಅಂಗಡಿ ಮಾಲಿಕರನ್ನು ದರೋಡೆಕೋರರ ತರಹ ನೀನು ಅಂಗಡಿಯನ್ನು ಬಂದ ಮಾಡಿ ನಮ್ಮ ಜೊತೆ ಠಾಣೆಗೆ ಬಾ ಎಂದು ಕಳ್ಳನ ಜೊತೆಗೆ ಅಪರಾಧಿ ತರಹ ಅವರನ್ನು ಪೊಲೀಸ್ ವಾಹನದಲ್ಲಿ ಕರೆದುಕೊಂಡು ಹೋಗಿ, ಪೊಲೀಸ್ ಠಾಣೆಯಲ್ಲಿ ಕಳ್ಳನು ಎಷ್ಟು ಬಂಗಾರ ಹೇಳುತ್ತಾನೋ ಅಷ್ಟನ್ನು ಸರಾಫ ವರ್ತಕರಿಗೆ ಬಲವಂತವಾಗಿ ಒಪ್ಪಿಸಿ ಅಷ್ಟು ಬಂಗಾರವನ್ನು ತೆಗದುಕೊಳ್ಳುತ್ತಾರೆ. ಇದಕ್ಕೆ ಯಾವುದೇ ರೀತಿಯ ಎಫ್.ಐ.ಆರ್. ಅಥವಾ ಪ್ರಕರಣ ದಾಖಲಿಸಿದ ಪುರಾವೆಗಳನ್ನು ಸಹ ನೀಡುವದಿಲ್ಲ. ಹೀಗೆ ಬಲವಂತವಾಗಿ ಅಮಾಯಕ ಸರಾಫ್ ವರ್ತಕರಿಂದ ಕಾನೂನು ಬಾಹೀರವಾಗಿ ಬಂಗಾರವನ್ನು ಪಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದ ಅವರು, ತಾಲೂಕಿನಾದ್ಯಂತ ಸರಾಫ (ಬಂಗಾರ) ವರ್ತಕರು ಭಯದ ವಾತಾರವರಣದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ.

ಪ.ಪಂ. ಸದಸ್ಯ ಚೇತನ ನಿರಾಳೆ ಮಾತನಾಡಿ, ಪೊಲೀಸರು ಅಮಾಯಕ ಸರಾಫ ವರ್ತಕರ ಮೇಲೆ ಈ ರೀತಿ ದೌರ್ಜನ್ಯವೆಸಗುತ್ತಿರುವದು ಖಂಡನೀಯ. ಯಾರೋ ಕಳ್ಳರು ಹೇಳಿದ ಮಾತನ್ನು ನಂಬಿ ಯಾವುದೇ ತನಿಖೆ ಮಾಡದೇ ಏಕಾ ಏಕಿ ಅಂಗಡಿಗೆ ಬಂದು ಸರಾಫ ವರ್ತಕರನ್ನು ಘೋಷಿತ ಆರೋಪಿಗಳ ತರಹ ಪೊಲಿಸ್ ಠಾಣೆಗೆ ಕರೆದುಕೊಂಡು ಹೋಗಿ ಬಂಗಾರ ವಸೂಲಿ ಮಾಡುತ್ತಿದ್ದಾರೆ. ಇಂತಹ ದೌರ್ಜನ್ಯವನ್ನು ನಾವು ಇಲ್ಲಿಯವರೆಗೆ ಸಹನೆಯಿಂದ ಸಹಿಸಿಕೊಂಡಿದ್ದೇವೆ. ಆದರೆ ನಮ್ಮ ಸಹನೆಯ ಕಟ್ಟೆ ಒಡೆದಿದ್ದು, ಇನ್ನು ಮುಂದೆ ನಾವು ಯಾವುದೇ ರೀತಿಯ ದೌರ್ಜನ್ಯವನ್ನು ಸಹಿಸಿಕೊಳ್ಳಲ್ಲ ಎಂದ ಅವರು, ಪೊಲೀಸರು ಇಂತಹ ಕಾನೂನು ಬಾಹೀರ ಕೆಲಸಗಳನ್ನು ಇಲ್ಲಿಗೆ ನಿಲ್ಲಿಸಬೇಕು. ಇಲ್ಲದೇ ಹೋದರೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಜಿ.ಡಿ. ಪಾವಲೆ ಸೇರಿದಂತೆ ಮತ್ತಿತರರು ಮಾತನಾಡಿದರು.

ಪ್ರತಿಭಟನೆಯಲ್ಲಿ ಪ್ರಕಾಶ ಬಂಡರಕವಟೆ, ಆರ್.ಜಿ.ಪಾವಲೆ, ಎಸ್.ಜಿ.ಪಾವಲೆ, ಉಮೇಶ ಪತ್ತಾರ, ಐ.ಸಿ.ಪತ್ತಾರ, ಪಿಂಟು ಪತ್ತಾರ, ಮೌನೇಶ ಪತ್ತಾರ, ಧಾನೇಶ ಪೋತದಾರ, ಪ್ರವೀಣಗೌಡ ಪಾಟೀಲ, ಮಲ್ಲಿಕಾರ್ಜುನ ಬಂಡರಕವಟೆ, ಟಿ.ವಿ.ಪವಾರ, ರಾಜೇಶ ವರ್ಣೇಕರ ಸೇ-ರಿದಂತೆ ನೂರಾರು ಸರಾಫ ವರ್ತಕರು ಇದ್ದರು.

# ಬಾಬುಜಿ ಜಯಂತಿ ಆಚರಿಸದ ಅಧಿಕಾರಿ :ದಲಿತ ಮುಖಂಡರ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಡಾ.ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಗೌರವಯುತವಾಗಿ ಆಚರಿಸುವಲ್ಲಿ ನಿರ್ಲಕ್ಷ್ಯ ವಹಿಸಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಅಧಿಕಾರಿ ರವೀಂದ್ರ ಮುರಗಾಲಿ ಅವರ ಧೋರಣೆಯನ್ನು ಖಂಡಿಸಿ, ಸೋಮವಾರ ಕಚೇರಿ ಆವರಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಮುಖಂಡ ಶಿವಾನಂದ ಸೌದಾಗರ ತಿಳಿಸಿದ್ದಾರೆ.

ಮಾಧ್ಯಮದವರ ಮುಂದೆ ಮಾತನಾಡಿದ ಶಿವಾನಂದ ಸೌದಾಗರ, ಅಧಿಕಾರಿಗಳ ಬೇಜವಾಬ್ದಾರಿಯನ್ನು ಎಳೆ-ಎಳೆಯಾಗಿ ಬಿಚ್ಚಿಟ್ಟರು. "ಜಯಂತಿಯ ದಿನದಂದು ಕಚೇ-ರಿಯಲ್ಲಿ ಯಾವುದೇ ಪೂಜೆ ಪುನಸ್ಕಾರ ಮಾಡಿರಲಿಲ್ಲ. ಈ ಬಗ್ಗೆ ಪ್ರಶ್ನಿಸಿದಾಗ, ಅಧಿಕಾರಿಗಳು ಹಾರಿಕೆ ಉತ್ತರ ನೀಡಿದ್ದಾರೆ. ದಲಿತ ಮುಖಂಡರು ಒತ್ತಾಯಿಸಿದ ನಂತರ ಮಧ್ಯಾಹ್ನ 2 ಗಂಟೆಗೆ ಪೂಜೆ ಮಾಡಲು ಸಂತೋಷ್ ಚೌವ್ಹಾಣ್ ಎಂಬ ಸಿಬ್ಬಂದಿಯನ್ನು ಕಳುಹಿಸಲಾಗಿತ್ತು. ಆದರೆ, ಆ ಸಿಬ್ಬಂದಿ ಮದ್ಯದ ಅಮಲಿನಲ್ಲಿ ಕಚೇರಿಗೆ ಬಂದು ಪೂಜೆ ಮಾಡಲು ಮುಂದಾಗಿದ್ದಾನೆ. ಇದನ್ನು ಸಾರ್ವಜನಿಕರು ಪ್ರಶ್ನಿಸಿದಾಗ ಕಚೇರಿಯನ್ನು ತೆರೆದಿಟ್ಟು ಅಲ್ಲಿಂದ ಪರಾರಿಯಾಗಿದ್ದಾನೆ. ತದನಂತರ ಸಂಜೆ 3:50ರ ಸುಮಾರಿಗೆ ಇಲಾಖೆಯ ಸಿಪಾಯಿ ಬಂದು ಕಾಟಾಚಾರಕ್ಕೆ ಪೂಜೆ ಮುಗಿಸಿದ್ದಾರೆ" ಎಂದು ಅವರು ಆರೋಪಿಸಿದರು.

ಮರುದಿನ ಮಧ್ಯಾಹ್ನ 3 ಗಂಟೆಗೆ ಕಚೇರಿಗೆ ಆಗಮಿಸಿದ ಅಧಿಕಾರಿ ರವೀಂದ್ರ ಮುರಗಾಲಿ ಅವರನ್ನು ಶಿವಾನಂದ ಸೌದಾಗರ ಹಾಗೂ ಇತರ ನಾಯಕರು ತರಾಟೆಗೆ ತೆಗೆದುಕೊಂಡರು.


ಈ ವೇಳೆ ಉತ್ತರಿಸಿದ ಅಧಿಕಾರಿಯು, "ನಾನು ರಜೆಯಲ್ಲಿದ್ದ ಕಾರಣ ಬರಲು ಸಾಧ್ಯವಾಗಲಿಲ್ಲ. ಮದ್ಯ ಸೇವಿಸಿ ಬಂದ ಸಿಬ್ಬಂದಿ ಸಂತೋಷ್ ಚೌವ್ಹಾಣ್ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು" ಎಂದು ತಿಳಿಸಿದ್ದಾರೆ.

ರಾಷ್ಟ್ರೀಯ ನಾಯಕರ ಜಯಂತಿಯನ್ನು ಅವಮಾನಿಸಿದ ಅಧಿಕಾರಿ ಮತ್ತು ಸಿಬ್ಬಂದಿಯ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ನಾಳೆ ಬೆಳಿಗ್ಗೆ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಯಲಿದೆ. "ಈ ಘಟನೆಯು ದಲಿತ ಸಮುದಾಯಕ್ಕೆ ಹಾಗೂ ಮಹಾನ್ ನಾಯಕರಿಗೆ ಮಾಡಿದ ಅಪಮಾನ. ಆದ್ದರಿಂದ ನಾಳೆ ದಲಿತ ಸಮಾಜದ ಮುಖಂಡರು, ಪ್ರಮುಖರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನ್ಯಾಯಕ್ಕಾಗಿ ಧ್ವನಿ ಎತ್ತಬೇಕು" ಎಂದು ಸೌದಾಗರ ಕರೆ ನೀಡಿದ್ದಾರೆ.

# ನೃತ್ಯ ನಾದದ ನಂದಾದೀಪ ಕು. ಪ್ರಣಾಂಜಲಿ ಕೊಪ್ಪದ

■ ಉದಯರಶ್ಮಿ ದಿನಪತ್ರಿಕೆ





ಭರತನಾಟ್ಯದ ನಾದವೇ ಜೀವನದ ಸ್ಪಂದನೆ ಎಂದು ನಂಬಿಕೊಂಡು, ಹೆಜ್ಜೆಗೆ ಗೆಜ್ಜೆ ಕಟ್ಟಿದ ಕ್ಷಣದಿಂದಲೇ ಕಲೆಯ ಮಾರ್ಗದಲ್ಲಿ ನಿಶ್ಚಲವಾಗಿ ಸಾಗುತ್ತಿರುವ ಯುವ ನೃತ್ಯ ಸಾಧಕಿ ಕುಮಾರಿ ಪ್ರಣಾಂಜಲಿ, ಇಂದಿನ ತಲೆಮಾರಿನಲ್ಲೇ ವಿಶಿಷ್ಟ ಸಾಂಸ್ಕೃತಿಕ ಚೈತನ್ಯವನ್ನು ಹೊತ್ತಿರುವ ಕಲಾವಿದೆ.

ಭರತನಾಟ್ಯದ ಮಧುರ ಲಯಕ್ಕೆ ಬಾಲ್ಯದಲ್ಲೇ ಮನಸೋತು, ಎಂಟರ ಎಳೆವಯಸ್ಸಿನಲ್ಲೇ ಗೆಜ್ಜೆ ಕಟ್ಟಿದ ಪ್ರತಿಭಾವಂತ ನೃತ್ಯಗಾರ್ತಿ ಕುಮಾರಿ ಪ್ರಣಾಂಜಲಿ, ಇಂದು ತನ್ನ ಕಲೆ ಮೂಲಕ ಸಂಸ್ಕೃತಿಯ ಸೌಂದರ್ಯವನ್ನು ಹರಡುತ್ತಿರುವ ಯುವ ಕಲಾವಿದೆ. ಭರತನಾಟ್ಯದ ಲಯ ಲಾಸ್ಯಕ್ಕೆ ಮನಸೊಪ್ಪಿದ ಅವಳು, ಧಾರವಾಡದ ಸಂಸ್ಕೃತಿಯ ಸುವಾಸನೆಯಲ್ಲಿ ವಿದುಷಿ ಶ್ರೀಮತಿ ಕುಮುದಿನಿ ರಾವ್ ಅವರಲ್ಲಿ ಪಂದನಲ್ಲೂರು ಶೈಲಿಯ ಶಿಸ್ತಿನ ಅಭ್ಯಾಸವನ್ನು ಆರಂಭಿಸಿದಳು. ಅದೇ ಸಮಯದಲ್ಲಿ ಕಥಕ್‌ನ ಸೊಗಡನ್ನೂ ಅರ್ಥೈಸಿಕೊಂಡು ತನ್ನ ಕಲಾ ವಿಸ್ತಾರವನ್ನು ಹೆಚ್ಚಿಸಿಕೊಂಡಳು. ನಂತರ ಬೆಂಗಳೂರಿನ ಕಲಾಭೂಮಿಯಲ್ಲಿ ವಳವೂರು ಶೈಲಿಯ ನುಡಿಮುತ್ತುಗಳನ್ನು ವಿದುಷಿ ಬಿ. ಭಾನುಮತಿ ಅವರಿಂದ ಕಲಿತು, ಅವರ ಆಶೀರ್ವಾದದಲ್ಲಿ ರಂಗಪ್ರವೇಶದ ಮಹತ್ವದ ಹೆಜ್ಜೆಯನ್ನು ಇಟ್ಟಳು. ವಿದುಷಿ ವಂದನಾ ಭಾರಧ್ವಾಜ್ ಅವರ ಮಾರ್ಗದರ್ಶನದಲ್ಲಿ ಅವಳ ನೃತ್ಯ ಇನ್ನಷ್ಟು ಭಾವಪೂರ್ಣ, ಸೂಕ್ಷ್ಮ ಹಾಗೂ ಸಾಂದ್ರತೆಯ ಅಭಿವ್ಯಕ್ತಿಯನ್ನು ಪಡೆದುಕೊಂಡಿದೆ.

ಪ್ರಣಾಂಜಲಿಯ ನೃತ್ಯ ಕೇವಲ ಹೆಜ್ಜೆಗಳ ಸರಮಾಲೆಯಲ್ಲ; ಅದು ಭಾವ, ಭಕ್ತಿ ಮತ್ತು ರಸದ ಮೇಳ. ಮೈಸೂರು ದಸರಾ ಮಹೋತ್ಸವದ ವೈಭವಶಾಲಿ ವೇದಿಕೆಗಳಿಂದ ಹಿಡಿದು ಹಂಪೆಯ ಐತಿಹಾಸಿಕ ನೆಲೆಯವರೆಗೂ, ರನ್ನ ಉತ್ಸವದ ಸಾಹಿತ್ಯ ಸುವಾಸನೆಯಿಂದ ಹಿಡಿದು ದೇವಗಿರಿ ದೇವಸ್ಥಾನದ ಪವಿತ್ರ ಗರ್ಭಗುಡಿಯ ವಾತಾವರಣದವರೆಗೂ ಅವಳ ಅಭಿನಯ ಕಣ್ಮನ ಸೆಳೆಯುವಂತೆ ಹರಡಿದೆ. ಅಹಮದಾಬಾದ್‌ನ ಹೊರನಾಡು ಉತ್ಸವ, ಹೈದರಾಬಾದ್‌ನ ಕಲಾ ಮೇಳ, ದೆಹಲಿಯ ಸಂಸ್ಕೃತಿ-ಕ ವೇದಿಕೆಗಳು ಹಾಗೂ ಮಲೇಷ್ಯಾದ ಅಂತರರಾಷ್ಟ್ರೀಯ ಅಂಗಳದಲ್ಲಿಯೂ ಅವಳ ನೃತ್ಯಭಾವ ಪ್ರತಿಧ್ವನಿಸಿದೆ.

ಅಖಿಲ ಭಾರತೀಯ ಗಂಧರ್ವ ಮಹಾವಿದ್ಯಾಲಯ ಮಂಡಳಿಯ ಪರೀಕ್ಷೆಗಳಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣಳಾದ ಪ್ರಣಾಂಜಲಿ, ಕಥಕ್‌ನ ಲಯಭಾವವನ್ನೂ ಗುರು ಶ್ರೀ ಶರತ್ ಪ್ರಭಾತ ಅವರಲ್ಲಿ ಅಭ್ಯಾಸಿಸುತ್ತಾ ತನ್ನ ಕಲಾಪಥವನ್ನು ಇನ್ನಷ್ಟು ಸಮೃದ್ಧಗೊಳಿಸುತ್ತಿದ್ದಾಳೆ.

ವೃತ್ತಿಪರ ಬದುಕಿನಲ್ಲಿ ಟಿಸಿಎಸ್ ಸಂಸ್ಥೆಯಲ್ಲಿ ಐಟಿ ಅನಾಲಿಸ್ಟ್ ಆಗಿ ಕಾರ್ಯನಿರ್ವಹಿಸುತ್ತಿದ್ದರೂ, ಅವಳ ಆತ್ಮಭಾವ ಕಲೆಯಲ್ಲೇ ನೆಲೆಸಿದೆ. ಚಿತ್ರಕಲೆಯಲ್ಲಿಯೂ ತನ್ನ ಸೃಜನಶೀಲತೆಯನ್ನು ವ್ಯಕ್ತಪಡಿಸುವ ಅವಳು, ಕಲೆ ಎಂಬ ಅನಂತ ಸಾಗರದಲ್ಲಿ ವಿಭಿನ್ನ ಅಲೆಗಳನ್ನು ಅನುಭವಿಸುತ್ತಿದ್ದಾಳೆ.

ಭರತನಾಟ್ಯದ ಕಲಿಕೆಗೆ ಇಪ್ಪತ್ತೈದು ವರ್ಷಗಳ ಸುದೀರ್ಘ ಪಯಣ ಮತ್ತು ರಂಗಪ್ರವೇಶದ ಏಳು ವರ್ಷಗಳ ಸಾರ್ಥಕ ಅನುಭವದ ಸ್ಮರಣಾರ್ಥವಾಗಿ, "ಶ್ರೀಹರಿ ಸ್ಮರಣಂ" ಎಂಬ ಶೀರ್ಷಿಕೆಯಡಿ ಅವಳು ಸಜ್ಜಾಗಿರುವ ನೃತ್ಯಪ್ರದರ್ಶನ, ಕೇವಲ ಕಾರ್ಯಕ್ರಮವಲ್ಲ- ಅದು ಭಕ್ತಿ ಮತ್ತು ಭಾವಗಳ ಸಂಗಮ, ಆತ್ಮಾನುಭವದ ನೃತ್ಯಯಜ್ಞ.

ಪ್ರತಿ ಅಂಗದಲ್ಲೂ ಸಂಸ್ಕೃತಿಯ ಸ್ಪರ್ಶ, ಪ್ರತಿಯೊಂದು ಭಾವದಲ್ಲೂ ಭಕ್ತಿಯ ಕಿರಣ, ಪ್ರತಿಯೊಂದು ಹೆಜ್ಜೆಯಲ್ಲೂ ಸಾಧನೆಯ ಧ್ವನಿ- ಇವೆಲ್ಲವೂ ಒಟ್ಟಾಗಿ ರೂಪುಗೊಂಡ ಪ್ರಣಾಂಜಲಿಯ ನೃತ್ಯ, ಕಲಾಭಿಮಾನಿಗಳ ಮನಸ್ಸಿನಲ್ಲಿ ಚಿರಸ್ಥಾಯಿಯಾಗಿ ಉಳಿಯುವ ನಂದಾದೀಪದಂತೆ ಪ್ರಕಾಶಿಸುತ್ತಿದೆ.

ಲೇಖನ
■ ಜ್ಯೋತಿ ಎಸ್
ಪತ್ರಿಕೋದ್ಯಮ ವಿದ್ಯಾರ್ಥಿನಿ
ವಿಜಯಪುರ

# ಶಂಕರ ಜಯಂತಿ ಆಚರಣೆಯಲ್ಲಿ ನಿರ್ಲಕ್ಷ್ಯ ಬೇಡ: ಮನವಿ

ಕಲಬುರಗಿ: ಏಪ್ರಿಲ್ 21ರಂದು ಜಗದ್ಗುರು ಆದಿ ಶಂಕರಾಚಾರ್ಯರ ಜಯಂತಿಯನ್ನು "ಶಂಕರ ಜಯಂತಿ (ತತ್ವಜ್ಞಾನಿಗಳ ದಿನ)"ವಾಗಿ ಜಿಲ್ಲಾಡಳಿತದಿಂದ ಆಚರಿಸಲಾಗುತ್ತಿರುವ ಹಿನ್ನೆಲೆಯಲ್ಲಿ, ಪೂರ್ವಭಾವಿ ಸಭೆಗೆ ಸನಾತನ ಯುವಶಕ್ತಿ ಚಾರಿಟೇಬಲ್ ಟ್ರಸ್ಟ್ (ರಿ) ಪದಾಧಿಕಾರಿಗಳನ್ನು ಆಹ್ವಾನಿಸಲು ಮನವಿ ಸಲ್ಲಿಸಲಾಗಿದೆ. ನಗರದ ಪಂಡಿತ ರಂಗಮಂದಿರದಲ್ಲಿ ಗಣ್ಯರು, ಸ್ಥಳೀಯ ಶಾಸಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ಸಮ್ಮುಖದಲ್ಲಿ ಕಾರ್ಯಕ್ರಮವನ್ನು ಭವ್ಯವಾಗಿ ಆಯೋಜಿಸಲು ಜಿಲ್ಲಾಡಳಿತ ಕೈಗೊಂಡಿರುವ ಕ್ರಮ ಶ್ಲಾಘನೀಯವಾಗಿದೆ. ಆದರೆ, ಕೆಲ ಸಂದರ್ಭಗಳಲ್ಲಿ ಜನಪ್ರತಿನಿಧಿಗಳ ನಿರ್ಲಕ್ಷ್ಯ ಹಾಗೂ ಇಲಾಖೆಗಳ ಮಟ್ಟದಲ್ಲಿ ಅಗತ್ಯ ಮಾರ್ಗಸೂಚಿಗಳು ಸಮರ್ಪಕವಾಗಿ ತಲುಪದಿರುವುದು ವಿಷಾದನೀಯವಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಿತ ಎಲ್ಲಾ ಇಲಾಖೆಗಳಿಗೂ ಸ್ಪಷ್ಟ ಸೂಚನೆಗಳನ್ನು ನೀಡುವಂತೆ, ಶಂಕರಾಚಾರ್ಯರ ಭಾವಚಿತ್ರ ಅಳವಡಿಸಿ ಜಯಂತಿ ಆಚರಣೆ ಮಾಡಲು ನಿರ್ದೇಶನ ನೀಡಬೇಕು. ಜೊತೆಗೆ, ಜನಪ್ರತಿನಿಧಿಗಳ ಸಕ್ರಿಯ ಭಾಗವಹಿಸುವಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ. ಜಗದ್ಗುರು ಆದಿ ಶಂಕರಾಚಾರ್ಯರು ಸನಾತನ ಧರ್ಮದ ಪ್ರಸಾರಕ್ಕಾಗಿ ದೇಶದಾದ್ಯಂತ ಸಂಚರಿಸಿದ ಮಹಾನ್ ತತ್ವಜ್ಞಾನಿ. ಅವರ ಆದರ್ಶಗಳನ್ನು ಸ್ಮರಿಸುವ ಈ ಜಯಂತಿಯನ್ನು ಸರ್ಕಾರದ ಗೌರವಗಳೊಂದಿಗೆ ಭವ್ಯವಾಗಿ ಆಚರಿಸುವುದು ಅಗತ್ಯವೆಂದು ಮನವಿಯಲ್ಲಿ ತಿಳಿಸಲಾಗಿದೆ. ಇದೇ ಸಂದರ್ಭದಲ್ಲಿ ಟ್ರಸ್ಟ್ ಗೌರವಾಧ್ಯಕ್ಷರಾದ ಶ್ರೀ ಪಿ.ವಿ. ಜೋಶಿ, ಖಜಾಂಚಿಗಳಾದ ಶ್ರೀ ಶ್ರೀಪಾದ ಜೋಶಿ, ಸಂಯುಕ್ತ ಕಾರ್ಯದರ್ಶಿ ಶ್ರೀ ನಾರಾಯಣ ಜಹಾಗೀರದಾರ್ ಹಾಗೂ ಸದಸ್ಯ ಶ್ರೀ ಉಲ್ಲಾಸ ಕುಲಕರ್ಣಿ ಉಪಸ್ಥಿತರಿದ್ದರು.

# ಮಿರಿಯಾಣದಲ್ಲಿ ಕುಡಿವ ನೀರು, ಪಿಂಚಣಿ ಸಮಸ್ಯೆ: ರಸ್ತೆಯಲ್ಲಿ ಖಾಲಿ ಕೊಡಗಳೊಂದಿಗೆ ಗ್ರಾಮಸ್ಥರ ಪ್ರತಿಭಟನೆ



ಚಿಂಚೋಳಿ: ಬೇಸಿಗೆಯ ಸಂದರ್ಭದಲ್ಲಿ ಕುಡಿಯುವ ನೀರಿಗಾಗಿ ಹಾಹಾಕಾರ ಉಂಟಾಗಿದ್ದು, ತಾಲ್ಲೂಕಿನ ಮಿರಿಯಾಣ ಗ್ರಾಮಸ್ಥರು ಕುಡಿಯುವ ನೀರಿಗಾಗಿ ಮಿರಿಯಾಣಾ ಪಿರಕಟ್ಟಿ ಹತ್ತಿರ ರಸ್ತೆ ತಡೆ ಚಳುವಳಿ ಮಾಡಿದರು. ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಅವರ ನೇತೃತ್ವದಲ್ಲಿ ಗ್ರಾಮಸ್ಥರು ಖಾಲಿ ಕೊಡಗಳೊಂದಿಗೆ ರಸ್ತೆ ಮೇಲೆ ಇಟ್ಟು ರಸ್ತೆ ತಡೆ ಚಳುವಳಿ ಮಾಡಿದರು. ಜಾಫರ್‌ಖಾನ್ ಸೇರಿದಂತೆ ನಿವಾಸಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಕಾರರು ನಂತರ ತಹಸಿಲ್ದಾರ್ ಹಾಗೂ ಕಲಬುರ್ಗಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ತಾಲ್ಲೂಕು ಆರೋಗ್ಯ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಹತ್ತು ಹಲವು ಬೇಡಿಕೆಗಳನ್ನು ಇಡೇರಿಸಲು ಮನವಿ ಮಾಡಿದರು.

ಮಿರಿಯಾಣ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ,ವಯೋ ವೃದ್ದರ ಮಾಶಾಸನ ಹಣ ಸ್ಥಗಿತಗೊಂಡ ಹಣ ಬಿಡುಗಡೆ ಮಾಡುವಂತೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕುಡಿಯುವ ನೀರಿನ ಶುದ್ದೀಕರಣ ಘಟಕ ದುರಸ್ತಿಗೊಳಿಸುವಂತೆ, ಪ್ರಾಥಮಿಕ ಆರೋಗ್ಯ ಕೇಂದ್ರ ದಲ್ಲಿ ಕಳಪೆ ಮಟ್ಟದ ಕಾಮಗಾರಿ ಕಟ್ಟಡ ಬಿಲ್ಡಿಂಗ್ ತನಿಖೆ ಕೈಗೊಳ್ಳುವಂತೆ ಅವರು ಒತ್ತಾಯಿಸಿದರು.

ತಾಲ್ಲೂಕಿನ ಮಿರಿಯಾಣ ಗ್ರಾಮದ ಇಂದಿರಾ ನಗರ ಬಡಾವಣೆಯಲ್ಲಿ ಕುಡಿಯುವ ನೀರಿನ ಆಹಾಕಾರ ತುಂಬಾ ಉಲ್ಬಣಗೊಂಡಿದೆ. ಜನರು ನೀರಿಗಾಗಿ ತತ್ತರಿಸಿ ಪರದಾಡುವಂತಾಗಿದೆ ಬೇಸಿಗೆ ಕಾಲದಲ್ಲಿ ಕೊಡ ಹಿಡಿದುಕೊಂಡು ನೀರಿಗಾಗಿ ಸಾರ್ವಜನಿಕರ ಅಲೆದಾಡುತ್ತಿದ್ದಾರೆ. ತಕ್ಷಣವೇ ಗ್ರಾಮದಲ್ಲಿ ಸಾರ್ವಜನಿಕ ಕುಡಿಯುವ ನೀರಿನ ಮೋಟಾರು ಕೆಟ್ಟಿದ್ದು ಮತ್ತು ಸ್ಟಾಟರ್ ಕೆಟ್ಟಿದ್ದು ತಕ್ಷಣವೇ ದುರಸ್ತಿ ಮಾಡಿ ಸಾರ್ವಜನಿಕ ಕುಡಿಯುವ ನೀರಿನ ವ್ಯವಸ್ಥೆ ತಕ್ಷಣವೇ ಮಾಡಬೇಕು ಎಂದು ಅವರು ಆಗ್ರಹಿಸಿದರು. ಮಿರಿಯಾಣ ಗ್ರಾಮದಲ್ಲಿ ವಯೋ ವೃದ್ಧರು ವಯಸ್ಕರರು ಬಂದ ಮಾಶಾಸನ ಪಿಂಚಣಿ ಹಣದ ಮೇಲೆ ನಂಬಿಕೋಂಡ ವಯೊ ವೃದ್ದರಿಗೆ ಗಂಜಿ ಆಸರೆಯಾಗಿದೆ ಪ್ರತಿ ತಿಂಗಳು ಬರುವ ಪಿಂಚಣಿ ಹಣ ಬಂದ್ ಆಗಿದೆ ವಯಸ್ಕರರು ಅವರ ಬದುಕು ಅಧೋಗತಿಯಾಗಿದೆ ಅವರ ಗೊಳು ಯಾರು ಕೇಳೊರಿಲ್ಲದಂತಾಗಿದೆ ತಹಸಿಲ್ದಾರರು ಕಚೆರಿ ಅಲೆದಾಡಿದರು ಅಲ್ಲಿ ಬರಿ ಕುಂಟು ನೆಪ ಹೇಳಿ ಸತಾಯಿಸುತ್ತಿದ್ದಾರೆ. ಉರಿ ಬಿಸಿಲಿನಲ್ಲಿ ತಹಸಿಲ್ದಾರರು ಕಚೇರಿಗೆ ಓಡಾಡಿ ಸುಸ್ತಾದ ವಯೋ ವೃದ್ಧರು ಗೋಳಾಡುತ್ತಿದ್ದಾರೆ. ಹಣ್ಣಾದ ಜೀವ ಅವರು ಅರ್ಧಕ್ಕೆ ನಿಂತ ಸಂಧ್ಯಾ ಸುರಕ್ಷೆ ವಿಧವಾ ವೇತನ ವೃದ್ಯಾಪ ವೇತನ ಹಣ ಕೂಡಲೆ ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದರು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಧ್ಯಾರ್ಥಿಗಳಿಗೆ ಶುದ್ದವಾದ ಕುಡಿಯುವ ನೀರು ಇಲ್ಲದೆ ದೊಡ್ಡ ಸಮಸ್ಯೆ ಆಗಿದೆ. ಶಾಲೆಯಲ್ಲಿ ಇದ್ದ ಕುಡಿಯುವ ನೀರಿನ ಶುದ್ದೀಕರಣ ಘಟಕ ಕೆಟ್ಟು ಹೋಗಿದೆ. ಮಕ್ಕಳಿಗೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಕುಡಿಯುವ ನೀರಿನ ಶುದ್ದೀಕರಣ ಘಟಕ ತುರ್ತಾಗಿ ದುರಸ್ತಿ ಮಾಡಬೇಕು ಎಂದು ಅವರು ಆಗ್ರಹಿಸಿದರು.ಮಿರಿಯಾಣ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ವಸತಿ ಕಟ್ಟಡ ಕಾಮಗಾರಿ ಮುಗಿದು 4 ವರ್ಷ ಆದರು ವಸತಿಗೃಹ ಕಟ್ಟಡ ಅಪೂರ್ಣವಾಗಿದೆ. ಆದರೆ ಗುತ್ತಿಗೆದಾರರು ಭೊಗಸ್ ಬಿಲ್ ಎತ್ತಿ ಹಾಕಿದ್ದಾರೆ.

ಸುಣ್ಣಾ ಬಣ್ಣಾ ಇಲ್ಲ ಮತ್ತು ಗೇಟ್‌ಗಳು ಹಾಳಾಗಿವೆ. ವಸತಿಗೃಹಗಳು ಒಳಗಡೆ ಪರಸಿ ಹಾಕಿಲ್ಲ. ಕಳಪೆ ಮಟ್ಟದ ಕಾಮಗಾರಿ ಮಾಡಿದ್ದು ಮತ್ತು ಬಿಲ್ ಎತ್ತಿದ್ದು ವಸತಿಗೆ ಯೋಗ್ಯ ಆಗಿಲ್ಲ. ಇದನ್ನು ಕೂಡಲೆ ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ತನಿಖೆ ತಪ್ಪಿತಸ್ಥರ ಮೇಲೆ ಕಾನೂನಿನ ಪ್ರಕಾರ ಕ್ರಿಮಿನಲ್ ಪೊಲೀಸ್ ಪ್ರಕರಣ ಹಾಕಿ ಗುತ್ತಿಗೆದಾರರು ಪರವಾನಗಿ ಕಪ್ಪು ಪಟ್ಟಿಗೆ ಸೇರಿಸಿ ಪುನ: ಪೂರ್ತಿ ಕಾಮಗಾರಿ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಶಂಕರ ಜಯಂತಿ ಆಚರಣೆಯಲ್ಲಿ ನಿರ್ಲಕ್ಷ್ಯ ಬೇಡ: ಮನವಿ

ಕಲಬುರಗಿ: ಏಪ್ರಿಲ್ 21ರಂದು ಜಗದ್ಗುರು ಆದಿ ಶಂಕರಾಚಾರ್ಯರ ಜಯಂತಿಯನ್ನು "ಶಂಕರ ಜಯಂತಿ (ತತ್ವಜ್ಞಾನಿಗಳ ದಿನ)"ವಾಗಿ ಜಿಲ್ಲಾಡಳಿತದಿಂದ ಆಚರಿಸಲಾಗುತ್ತಿರುವ ಹಿನ್ನೆಲೆಯಲ್ಲಿ, ಪೂರ್ವಭಾವಿ ಸಭೆಗೆ ಸನಾತನ ಯುವಶಕ್ತಿ ಚಾರಿಟೇಬಲ್ ಟ್ರಸ್ಟ್ (ರಿ) ಪದಾಧಿಕಾರಿಗಳನ್ನು ಆಹ್ವಾನಿಸಲು ಮನವಿ ಸಲ್ಲಿಸಲಾಗಿದೆ. ನಗರದ ಪಂಡಿತ ರಂಗಮಂದಿರದಲ್ಲಿ ಗಣ್ಯರು, ಸ್ಥಳೀಯ ಶಾಸಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ಸಮ್ಮುಖದಲ್ಲಿ ಕಾರ್ಯಕ್ರಮವನ್ನು ಭವ್ಯವಾಗಿ ಆಯೋಜಿಸಲು ಜಿಲ್ಲಾಡಳಿತ ಕೈಗೊಂಡಿರುವ ಕ್ರಮ ಶ್ಲಾಘನೀಯವಾಗಿದೆ. ಆದರೆ, ಕೆಲ ಸಂದರ್ಭಗಳಲ್ಲಿ ಜನಪ್ರತಿನಿಧಿಗಳ ನಿರ್ಲಕ್ಷ್ಯ ಹಾಗೂ ಇಲಾಖೆಗಳ ಮಟ್ಟದಲ್ಲಿ ಅಗತ್ಯ ಮಾರ್ಗಸೂಚಿಗಳು ಸಮರ್ಪಕವಾಗಿ ತಲುಪದಿರುವುದು ವಿಷಾದನೀಯವಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಿತ ಎಲ್ಲಾ ಇಲಾಖೆಗಳಿಗೂ ಸ್ಪಷ್ಟ ಸೂಚನೆಗಳನ್ನು ನೀಡುವಂತೆ, ಶಂಕರಾಚಾರ್ಯರ ಭಾವಚಿತ್ರ ಅಳವಡಿಸಿ ಜಯಂತಿ ಆಚರಣೆ ಮಾಡಲು ನಿರ್ದೇಶನ ನೀಡಬೇಕು. ಜೊತೆಗೆ, ಜನಪ್ರತಿನಿಧಿಗಳ ಸಕ್ರಿಯ ಭಾಗವಹಿಸುವಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ. ಜಗದ್ಗುರು ಆದಿ ಶಂಕರಾಚಾರ್ಯರು ಸನಾತನ ಧರ್ಮದ ಪ್ರಸಾರಕ್ಕಾಗಿ ದೇಶದಾದ್ಯಂತ ಸಂಚರಿಸಿದ ಮಹಾನ್ ತತ್ವಜ್ಞಾನಿ. ಅವರ ಆದರ್ಶಗಳನ್ನು ಸ್ಮರಿಸುವ ಈ ಜಯಂತಿಯನ್ನು ಸರ್ಕಾರದ ಗೌರವಗಳೊಂದಿಗೆ ಭವ್ಯವಾಗಿ ಆಚರಿಸುವುದು ಅಗತ್ಯವೆಂದು ಮನವಿಯಲ್ಲಿ ತಿಳಿಸಲಾಗಿದೆ. ಇದೇ ಸಂದರ್ಭದಲ್ಲಿ ಟ್ರಸ್ಟ್ ಗೌರವಾಧ್ಯಕ್ಷರಾದ ಶ್ರೀ ಪಿ.ವಿ. ಜೋಶಿ, ಅಧ್ಯಕ್ಷರಾದ ಶ್ರೀ ಗುರುರಾಜ ಕುಲಕರ್ಣಿ ನಿಂಬರ್ಗಿ, ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನ ದೇಶಪಾಂಡೆ, ಖಜಾಂಚಿಗಳಾದ ಶ್ರೀ ಶ್ರೀಪಾದ ಜೋಶಿ, ಸಂಯುಕ್ತ ಕಾರ್ಯದರ್ಶಿ ಶ್ರೀ ನಾರಾಯಣ ಜಹಾಗೀರದಾರ್ ಹಾಗೂ ಸದಸ್ಯ ಶ್ರೀ ಉಲ್ಲಾಸ ಕುಲಕರ್ಣಿ ಉಪಸ್ಥಿತರಿದ್ದರು.

# ಶರಣರ ವಚನಗಳು ಬದುಕಿಗೆ ಬೆಳಕು ನೀಡುವ ಸಾಧನ : ಶಾರದಾ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 12ನೇ ಶತಮಾನದಲ್ಲಿ ಬಸವಾದಿ ಶರಣರು ತಮ್ಮ ವಚನಗಳ ಮೂಲಕ ಲೌಕಿಕ, ಅಲೌಕಿಕ, ಸತ್ಯ, ನಿಷ್ಠೆಯಿಂದ ನಡೆಯಲು ಸಂದೇಶ ನೀಡಿದ್ದಾರೆ. ಅದರಲ್ಲಿ ಕಾಯಕ, ದಾಸೋಹ ಪೂಜೆಯಾಗಬೇಕು ಎಂದು ಉಪನ್ಯಾಸಕಿ ಶಾರದಾ ಕೊಪ್ಪ ಐಹೊಳ್ಳಿ ಹೇಳಿದರು.

ನಗರದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾ ಘಟಕದವರು ವೀರಶೈವ ಸಭಾ ಭವನದಲ್ಲಿ ಏರ್ಪಡಿಸಿದ 75ನೇ ಮಾಸಿಕ ಶಿವಾನುಭವ ಗೋಷ್ಠಿಯಲ್ಲಿ 'ವಚನ ಬಂಡಾಯ ಶಾಂತರಸ ಅವರ ಬದುಕು ಮತ್ತು ಸಾಧನೆ' ಕುರಿತು ಮಾತನಾಡಿದರು.

ಅನುಭವ ಮಂಟಪದ ಅಂಗ ಸಂಸ್ಥೆ ಅದರ ಕಾರ್ಯ ಬಸವಾದಿ ಶರಣರು ರಚಿಸಿದ ವಚನಗಳನ್ನು ವ್ಯವಸ್ಥಿತವಾಗಿ ಜೋಡಿಸಿರುವ ಕಾರ್ಯ ಶಾಂತರಸರದು ಅದರಂತೆ ಶರಣರ ವಚನಗಳನ್ನು ಬರೆದು ಬರೆಸುವ ನಡೆದಂತೆ ನುಡಿಯುವ ಚಿಂತನ–ಮಂಥನ ನಡೆದು ಬಸವಣ್ಣನವರ ಮುದ್ರೆಯೊಂದಿಗೆ ಭಂಡಾರಕ್ಕೆ ಕಳುಹಿಸುವ ಕಾಯಕ ಮಾಡುತ್ತ ವಚನ ಕಟ್ಟುಗಳನ್ನು ವ್ಯವಸ್ಥಿತವಾಗಿ ಸಂರಕ್ಷಿಸುವ ಕಾರ್ಯ ಮಾಡುತ್ತಿದ್ದರು. ಶಾಂತರಸರು ಶರಣರು ಗ್ರಂಥಾಲಯ ಭಂಡಾರದ ಮುಖ್ಯಸ್ಥರು. ಜನರಿಂದ ಜನರಿಗಾಗಿ ವಚನ ಭಂಡಾರ ಶಾಂತರಸರು 'ಅಲೇಖನಾದ ಶೂನ್ಯ ಕಲ್ಲಿದೇವ' ಎಂಬ ಅಂಕಿತನಾಮ ಇಟ್ಟುಕೊಂಡು ಸರ್ವೋದಯದ ಏಳ್ಗೆಗಾಗಿ 65 ಬೆಡಗಿನ ವಚನಗಳನ್ನು ರಚಿಸಿದ್ದಾರೆ. ಅವರ ವಚನಗಳು ಇಂದಿಗೂ ಬದುಕಿಗೆ ಬೆಳಕು ನೀಡುವ ಸಾಧನವಾಗಿವೆ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.




ಮಹಾಸಭೆಯ ಕಾರ್ಯದರ್ಶಿ ದೊಡ್ಡಣ್ಣ ಬಜಂತ್ರಿ ಮಾತನಾಡಿ, ಶಾಂತರಸರ ವಚನಗಳಲ್ಲಿ ಸಾಮಾಜಿಕ ಅನಿಷ್ಠ ಪದ್ದತಿ ವೈಚಾರಿಕ ನೆಲೆ, ಸಮಾಜ ಪರಿವರ್ತನೆಗೆ ಶ್ರೇಷ್ಟ ಮಂತ್ರಗಳಿದ್ದ ಹಾಗೆ ಎಂದರು.

ಮಹಾಸಭೆ ಜಿಲ್ಲಾಧ್ಯಕ್ಷ ವಿ.ಸಿ. ನಾಗಠಾಣ ಮಾತನಾಡುತ್ತ, ವಚನ ಭಂಡಾರಿ ಶಾಂತರಸರು ರಾಜ ಮನೆತನಕ್ಕೆ ಸೇರಿದವರು ಬಸವಾದಿ ಶರಣರ ಬದುಕಿನ ನುಡಿಗಳು, ನಡೆ, ನುಡಿ, ಚಿಂತನ, ಮಂಥನ ಮಾಡಿ ತಾಡೋಲೆಗಳನ್ನು ತಯಾರಿಸಿ ಸಂರಕ್ಷಿಸಿ ದೊಡ್ಡ ಕಾರ್ಯ ಶಾಂತರಸರು ಮಾಡಿದ್ದಾರೆ. ಹೀಗಾಗಿ ಅವರಿಗೆ ವಚನ ಭಂಡಾರಿ ಎಂದು ಬಸವಣ್ಣನವರು ಕರೆಯುತ್ತಿದ್ದರು ಎಂದರು.

ಡಾ. ಸೋಮಶೇಖರ ವಾಲಿ, ಅಪ್ಪಾಸಾಹೇಬ ಕೋರಿ ವಚನಗೀತೆ ಪ್ರಸ್ತುತ ಪಡಿಸಿದರು.

ಡಾ. ಸಂಗಮೇಶ ಮೇತ್ರಿ ಸ್ವಾಗತಿಸಿದರು. ವಿಠ್ಠಲ ತೇಲಿ ವಂದಿಸಿದರು. ಸಾಹಿತಿ ಸಂಗಮೇಶ ಬದಾಮಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಮ.ಗು.ಯಾದವಾಡ, ಬಸವರಾಜ ಒಂಟಗೊಡೆ, ನೂತನ ಬ್ಯಾಕೋಡ, ಸುಭಾಸ ಬೆಟಗೇರಿ, ಡಾ. ವಿ.ಡಿ. ಐಹೊಳ್ಳಿ, ಕಾಶೀನಾಥ ಅಣೆಪ್ಪನವರ, ವಿಶ್ರಾಂತ ಎ.ಎಸ್.ಐ. ಪಟ್ಟಣಶೆಟ್ಟಿ, ಈರಣ್ಣ ತೊಂಡಿಕಟ್ಟಿ ಹಾಗೂ ಶರಣರು, ಶರಣೆಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಡಾ. ಬಾಬು ಜಗಜೀವನರಾಂ ದೇಶದ ನಿಜವಾದ ಅನ್ನದಾತ:ಅಲ್ಲಮಪ್ರಭು ಪಾಟೀಲ

ಕಲಬುರಗಿ:ದೇಶವು ಆಹಾರದ ತೀವ್ರ ಬಿಕ್ಕಟ್ಟನ್ನು ಎದುರಿಸುತ್ತಿದ್ದ ಸಂದರ್ಭದಲ್ಲಿ ಹಸಿರು ಕ್ರಾಂತಿಯ ಮೂಲಕ ದೇಶದ ಹಸಿವನ್ನು ನೀಗಿಸಿದ ಮಹಾನ್ ಚೇತನ ಡಾ. ಬಾಬು ಜಗಜೀವನರಾಂ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ಭಾನುವಾರ ನಗರದ ಇಂದಿರಾ ಸ್ಮಾರಕ ಭವನದಲ್ಲಿ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಭಾರತದ ಮಾಜಿ ಉಪ ಪ್ರಧಾನಿ, ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ರವರ 119 ನೇ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತವು ಹಸಿವಿನಿಂದ ಬಳಲುತ್ತಿದ್ದ ಕಾಲದಲ್ಲಿ ಕೃಷಿ ಸಚಿವರಾಗಿ ಡಾ. ಬಾಬು ಜಗಜೀವನರಾಂ ಅವರು ತಂದ ಕ್ರಾಂತಿಕಾರಿ ಬದಲಾವಣೆಗಳಿಂದಾಗಿ ಇಂದು ನಾವು ಆಹಾರ ರಫ್ತು ಮಾಡುವ ಹಂತಕ್ಕೆ ತಲುಪಿದ್ದೇವೆ. ಅವರು ಈ ದೇಶದ ಪಾಲಿಗೆ ನಿಜವಾದ ಅನ್ನದಾತ ಎಂದು ತಿಳಿಸಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರ ನಂತರ ಶೋಷಿತ ವರ್ಗಗಳ ಹಕ್ಕುಗಳಿಗಾಗಿ ಸಂಸತ್ತಿನಲ್ಲಿ ಪ್ರಬಲವಾಗಿ ಧ್ವನಿ ಎತ್ತಿದವರು ಬಾಬುಜೀ. ಅವರ ಹೋರಾಟ ಮತ್ತು ದಕ್ಷ ಆಡಳಿತ ಯುವ ಪೀಳಿಗೆಗೆ ಮಾದರಿ. ಇತಿಹಾಸವನ್ನು ಮರೆತವರು ಇತಿಹಾಸ ಸೃಷ್ಟಿಸಲಾರರು" ಎಂಬ ಅಂಬೇಡ್ಕರ್ ಅವರ ಮಾತಿನಂತೆ, ಮಹಾನ್ ಪುರುಷರ ಸಾಧನೆಗಳನ್ನು ನೆನಪಿಸಿಕೊಳ್ಳುವುದು ನಮ್ಮ ಕರ್ತವ್ಯ. ಕೇವಲ ಭಾಷಣಕ್ಕೆ ಸೀಮಿತವಾಗದೆ ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷಾನ ಪ್ರಾಧಿಕಾರ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಅವರು ಮಾತನಾಡಿ ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಏಕೈಕ ದಾರಿ, ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನರಾಂ ಅವರು ತೋರಿದ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕು. ನಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದು ಪೋಷಕರ ಮೊದಲ ಆದ್ಯತೆಯಾಗಬೇಕು. ಶಿಕ್ಷಣವಂತರಾದಾಗ ಮಾತ್ರ ಸಮಾಜದಲ್ಲಿ ಗೌರವಯುತ ಸ್ಥಾನಮಾನ ಪಡೆಯಲು ಸಾಧ್ಯ ಎಂದು ಅವರು ತಿಳಿಸಿದರು.

ನಮ್ಮಲ್ಲಿ ಒಗ್ಗಟ್ಟಿದ್ದರೆ ಮಾತ್ರ ಯಾವುದೇ ಗುರಿಯನ್ನು ಸಾಧಿಸಲು ಸಾಧ್ಯ. ಭಿನ್ನಾಭಿಪ್ರಾಯಗಳನ್ನು ಮರೆತು ನಾವೆಲ್ಲರೂ ಒಂದಾಗಿ ಸಮಾಜದ ಏಳಿಗೆಗಾಗಿ ಶ್ರಮಿಸಬೇಕು ಎಂದು ಹೇಳಿದರು.ರಾಜ್ಯ ಸರ್ಕಾರದ ಅನ್ನಭಾಗ್ಯ, ಗೃಹಲಕ್ಷ್ಮಿ, ಯುವನಿಧಿ ಮತ್ತು ಗೃಹಜ್ಯೋತಿ ಯೋಜನೆಗಳು ಬಡವರು ಹಾಗೂ ದೀನದಲಿತರ ಬಾಳಿಗೆ ಆಸರೆಯಾಗಿವೆ. ಈ ಯೋಜನೆಗಳಿಂದ ಅನೇಕ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಮಾತನಾಡಿ ಬಾಬುಜಿಯವರು ದೇಶದ ಹಸಿರು ಕ್ರಾಂತಿಯ ಹರಿಕಾರರು. ಕೃಷಿ ಸಚಿವರಾಗಿ ಅವರು ತಂದ ಸುಧಾರಣೆಗಳು ಭಾರತವನ್ನು ಆಹಾರದ ಸ್ವಾವಲಂಬನೆಯತ್ತ ಕೊಂಡೊಯ್ದವು. ಸಂವಿಧಾನ ರಚನಾ ಸಭೆಯ ಸದಸ್ಯರಾಗಿ ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ ಅವರ ಕೊಡುಗೆ ಅಪಾರ ಎಂದು ಹೇಳಿದರು.ಕಾರ್ಮಿಕ, ರಕ್ಷಣೆ ಮತ್ತು ಸಂವಹನ ಕ್ಷೇತ್ರಗಳಲ್ಲಿ ಅವರು ನೀಡಿದ ಸುದೀರ್ಘ ಸಂಸದೀಯ ಸೇವೆಯನ್ನು ಸ್ಮರಿಸಬೇಕು, ಬಾಬುಜಿಯವರ ಶಿಸ್ತು ಮತ್ತು ರಾಷ್ಟ್ರಪ್ರೇಮದ ಹಾದಿ ಇಂದಿನ ಯುವಜನತೆಗೆ ದಾರಿದೀಪವಾಗಿದೆ ಎಂದು ತಿಳಿಸಿದರು.

ಕೊಡ್ಲಿ ರಾಣಿ ಚನ್ನಮ ವಸತಿ ಶಾಲೆಯ ಪ್ರಾಚಾರ್ಯ ರಾಜಶೇಖರ ಮಾಂಗ ವಿಶೇಷ ಉಪನ್ಯಾಸ ನೀಡಿದ ಅವರು ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಬಾಬೂಜಿ ಅಂತಹ ಮಹಾನ್ ದಾರ್ಶನಿಕರ ತತ್ವಗಳು ಕೇವಲ ಒಂದು ದಿನದ ಆಚರಣೆಗೆ ಸೀಮಿತವಾಗಬಾರದು. ಅವರ ಜೀವನದ ಮೌಲ್ಯಗಳನ್ನು ನಾವು ದೈನಂದಿನ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಡಾ. ಬಾಬು ಜಗಜೀವನರಾಂ ಹೋರಾಟದ ಹಾದಿಯನ್ನು ಸ್ಮರಿಸಿದ ಅವರ ಅಸ್ಪೃಶ್ಯತೆ ಮತ್ತು ಬಡತನದ ನಡುವೆಯೂ ಶಿಕ್ಷಣದ ಮೂಲಕ ಉನ್ನತ ಸ್ಥಾನಕ್ಕೇರಿದ ಅವರ ಸಾಧನೆ ಇಂದಿನ ಪೀಳಿಗೆಗೆ ಮಾದರಿ.

ನಮ್ಮ ಭವಿಷ್ಯ ಹಣೆಬರಹದಲ್ಲಿಲ್ಲ ಅದು ನಮ್ಮ ಕೈಗಳಲ್ಲಿದೆ. ಶಿಕ್ಷಣ ಸಿಗದಿದ್ದರೆ ಸಮಾಜದ ಏಳಿಗೆ ಅಸಾಧ್ಯ, ಕಠಿಣ ಪರಿಶ್ರಮ ಮತ್ತು ಆತ್ಮವಿಶ್ವಾಸವಿದ್ದರೆ ಎಂತಹ ಗುರಿಯನ್ನೂ ತಲುಪಬಹುದು ಎಂದು ಹೇಳಿದರು.

ಇದಕ್ಕೂ ಮುನ್ನ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಅವರು ಟೌನ್ ಹಾಲ್ ಬಳಿಯ ಬಾಬೂಜಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ್, ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ.,ಜಿಲ್ಲಾ ಪೊಲೀಸ್ ವರಿಷಾಧಿಕಾರಿ ಅಡ್ಡೂರು ಶ್ರೀನಿವಾಸಲು, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಉಪವಿಭಾಗ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಗೌರವಾಧ್ಯಕ್ಷರಾದ ಶ್ಯಾಮ್ ನಾಟಿಕರ್ ಸೇರಿದಂತೆ ಸಮಾಜದ ಮುಖಂಡರು ಮಹೇಶ್ ಹುಬ್ಬಳ್ಳಿ, ಲಿಂಗರಾಜ್, ರಾಜು ವಾಡೆಕರ್, ಇತರರು ಹಾಜರಿದ್ದರು.

# ಅನನ್ಯ ಅಲ್ಲಮ ಉತ್ತಮ ಆಕರ ಗ್ರಂಥ

■ ಉದಯರಶ್ಮಿ ದಿನಪತ್ರಿಕೆ

## ಹೊತ್ತಿಗೆ ಹೂರಣ

ನಾಡಿನ ಹಿರಿಯ ಅನುಭಾವಿ ಚಿಂತಕರು ಸಾಹಿತಿಗಳೂ ಆದ ಹರಿಹರ ಶಿವಕುಮಾರ ಬೆಂಗಳೂರು ಇವರು ಹರಿವು ಕ್ರಿಯೇಷನ್ಸ್ ಪ್ರೈವೇಟ್ ಲಿಮಿಟೆಡ್ ಪ್ರಕಾಶಕರ ಮೂಲಕ ಅನನ್ಯ ಅಲ್ಲಮ ಎಂಬ ಕೃತಿಯನ್ನು ಲೋಕಾರ್ಪಣೆ ಮಾಡಿದ್ದು ವಚನ ಸಾಹಿತ್ಯದ ಮೌಲ್ಯವನ್ನು ಪಸರಿಸುವ ವೈಚಾರಿಕ ನೆಲೆಯಲ್ಲಿ ರೂಪಗೊಂಡ ಸಿದ್ಧಾಂತಗಳ ಚರ್ಚೆಗೆ ಅವಕಾಶ ಮಾಡಿಕೊಡುವ ಸಂಗ್ರಹಕ್ಕೆ ಯೋಗ್ಯವಾದ ಒಂದು ಸುಂದರ ಆಕರ ಗ್ರಂಥ.

ಹರಿಹರ ಶಿವಕುಮಾರ ಬೆಂಗಳೂರು ಇವರು ವೃತ್ತಿಯಲ್ಲಿ ಚಾರ್ಟರ್ಡ್ ಅಕೌಂಟೆಂಟ್ ಮೂಲತಃ ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನವರು.


ವಚನ ಸಾಹಿತ್ಯದ ಬಗ್ಗೆ ಆಳವಾದ ಅಧ್ಯಯನ ಮಾಡಿದ ಅಪರೂಪದ ಪ್ರಬುದ್ಧ ಪ್ರಾಮಾಣಿಕ ವ್ಯಕ್ತಿ.

ಅನನ್ಯ ಅಲ್ಲಮ ಎಂಬ ಕೃತಿಯಲ್ಲಿ ಇವರು ಅಲ್ಲಮ ಪ್ರಭುಗಳ 75 ಸರಳ ಸ್ಥಲ ಕಟ್ಟಿನ ವಚನಗಳನ್ನು ಆಯ್ಕೆ ಮಾಡಿದ್ದಾರೆ.

ಅಲ್ಲಮರ ವಚನ ವಿಶ್ಲೇಷಣೆ ಚಿಂತನೆ ನಿಜಕ್ಕೂ ಕಬ್ಬಿಣದ ಕಡಲೆ ಇದ್ದ ಹಾಗೆ. ಲೇಖಕರಿಗೂ ಅಲ್ಲಮರ ವಚನ ವಿಶ್ಲೇಷಣೆ ಒಂದು ಕಠಿಣ ಪರಿಶ್ರಮವೆಂದು ತಿಳಿದುಕೊಂಡು ತಮ್ಮದೇ ಆದ ಅನುಭವವನ್ನು ಸಂಕಲನದಲ್ಲಿ

ಪದ ಅರ್ಥ ,ವಚನಾರ್ಥ, ಪದಪ್ರಯೋಗಾರ್ಥ ಎಂಬ ಮೂರು ಭಾಗಗಳಲ್ಲಿ ಮಾಡಿದ್ದು ವಾಚಾರ್ಥ ಗೂಢಾರ್ಥ ಲಕ್ಷಾರ್ಥಗಳ ಕಡೆಗೆ ಗಮನ ಕೊಟ್ಟಿದ್ದಾರೆ. ಅಲ್ಲಮರ ಬೆಡಗಿನ ವಚನಗಳು ಮತ್ತು ಅವುಗಳಲ್ಲಿರುವ ಪದಗಳಿಗೆ ಸಮಾನವಾದ ಅರ್ಥ ಹುಡುಕುವ ಪ್ರಯತ್ನ ಇವರದ್ದಾಗಿದೆ. ನಂತರ ಸಾಂದರ್ಭಿಕವಾಗಿ ಆ ಬೆಡಗಿನ ಪದಗಳ ಅರ್ಥವನ್ನು ಇಂದಿನ ಜಗತ್ತಿಗೆ ಅನುಗುಣವಾಗಿ ಸಮಯೋಚಿತವಾಗಿ ಅರ್ಥೈಸುವ ಇವರ ಶೈಲಿ ತುಂಬಾ ಚೆನ್ನಾಗಿದೆ.

ಇವರ ನಿರಂತರ ಪರಿಶ್ರಮ ಹಾಗೂ ಶ್ರದ್ಧೆ ಅಲ್ಲಮರ ಬೆಡಗಿನ ವಚನಗಳನ್ನು ಸರಳವಾಗಿ ಅರ್ಥೈಸಲು ಒಂದು ಸುಂದರ ಆಕರ ಪುಸ್ತಕ ಕೃತಿಯನ್ನು ಲೋಕಾರ್ಪಣೆ ಮಾಡಿದ್ದು ಅತ್ಯಂತ ಅಪರೂಪದ ಪ್ರಬುದ್ಧ ಕಾರ್ಯವೆಂದೆನಿಸುತ್ತದೆ.




ವಚನಗಳ ಅರ್ಥಗಳ ವಿವರಣೆ ಇನ್ನಷ್ಟು ವಿಸ್ತರಣೆಗೊಂಡಿದ್ದರೆ ಇನ್ನೂ ಹೆಚ್ಚಿನ ಸೊಗಡು ಎದ್ದು ಕಾಣುತಿತ್ತು. ಇದು ಶಿವಕುಮಾರ ಅವರ ಪ್ರಥಮ ಕೃತಿಯಾಗಿದೆ.

ಮುಂದಿನ ದಿನಗಳಲ್ಲಿ ಅವರಿಂದ ಇನ್ನೂ ಹೆಚ್ಚು ಹೆಚ್ಚು ಕೃತಿಗಳು ಲೋಕಾರ್ಪಣೆಯಾಗಲಿ ಎಂದು ಹಾರೈಸುತ್ತೇನೆ.

ಲೇಖಕರು
■ ಶ್ರೀ ಹರಿಹರ ಶಿವಕುಮಾರ
ಪ್ರಕಾಶಕರು, ಹರಿವು ಕ್ರಿಯೇಷನ್ಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು
ಬೆಲೆ 180 ರೂಪಾಯಿ
ವರ್ಷ 2026

# ಮನಸ್ಸಿನ ಕಿಟಕಿ ಗಾಜುಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳೋಣ

■ ಉದಯರಶ್ಮಿ ದಿನಪತ್ರಿಕೆ

## ಮನದಂಗಳ



ಹಳ್ಳಿಯಲ್ಲಿ ಸಣ್ಣ ಪುಟ್ಟ ಕೆಲಸಗಳನ್ನು ಮಾಡಿಕೊಂಡಿದ್ದ ಹರೀಶನು ತನ್ನ ಭವಿಷ್ಯವನ್ನು ರೂಪಿಸಿಕೊಳ್ಳುವ ಉದ್ದೇಶದಿಂದ ತನ್ನ ಹೆಂಡತಿ ಜೊತೆಗೆ ಪಟ್ಟಣಕ್ಕೆ ಉದ್ಯೋಗಕ್ಕೆಂದು ಬಂದನು. ಪಟ್ಟಣದಲ್ಲಿ ಈ ದಂಪತಿಗಳಿಬ್ಬರು ಬಾಡಿಗೆಯ ಮನೆಯೊಂದರಲ್ಲಿ ವಾಸವಾಗಿದ್ದರು. ಒಂದು ದಿನ ಹರೀಶನ ಹೆಂಡತಿ ಮಂಜುಳಾ ತನ್ನ ಪಕ್ಕದ ಮನೆಯಲ್ಲಿ ವಾಸವಾಗಿದ್ದ ಮಹಿಳೆಯೊಬ್ಬಳು ತನ್ನ ದೈನಂದಿನ ಬಟ್ಟೆಗಳನ್ನು ಒಗೆದು ಒಣಗಲು ಹಾಕಿರುವುದನ್ನು ಕಿಟಕಿಯ ಮೂಲಕ ನೋಡಿದಳು. ಕಿಟಕಿಯ ಮೂಲಕ ಹೊರಗೆ ನೋಡಿದಾಗ ಆಕೆಯು ಒಗೆದು ಒಣಗಲು ಹಾಕಿದ್ದ ಬಟ್ಟೆಗಳು ಸ್ವಚ್ಛವಾಗಿರದೇ, ತೀರಾ ಕೊಳೆಯಾಗಿ ಇರುವುದು ಕಂಡುಬಂತು.

ಬಹುಶಃ ಆಕೆಗೆ ಈಗಷ್ಟೇ ಮದುವೆ ಆಗಿರಬೇಕು, ಹಾಗಾಗಿ ಸ್ವಚ್ಛವಾಗಿ ಬಟ್ಟೆ ಒಗೆಯುವುದನ್ನು ಆಕೆಯಿನ್ನೂ ಕಲಿತಿರಲಿಕ್ಕಿಲ್ಲ, ಅಥವಾ ಬಟ್ಟೆ ಸ್ವಚ್ಛವಾಗಿ ಒಗೆಯಲು ಅಗತ್ಯವಿರುವ ಸಾಬೂನು ಮತ್ತು ಬಟ್ಟೆ ಒಗೆಯುವ ಪುಡಿ ಆಕೆಯಲ್ಲಿ ಇಲ್ಲದಿರಬಹುದು ಎಂದು ವ್ಯಂಗ್ಯವಾಗಿ ಮಂಜುಳಾ ತನ್ನ ಗಂಡನಿಗೆ ಹೇಳಿದಳು. ಪ್ರತಿದಿನವೂ ಆಕೆಯು ಒಗೆದು ಹಾಕುತ್ತಿದ್ದ ಬಟ್ಟೆಗಳು ಕೊಳೆಯಾಗಿ ಇರುವುದನ್ನು ನೋಡುತ್ತಿದ್ದ ಮಂಜುಳಾ ತನ್ನ ಗಂಡ ಹರೀಶನಿಗೆ ಹೇಳುತ್ತಾ ವ್ಯಂಗ್ಯವಾಗಿ ನಗುತ್ತಿದ್ದಳು. ಆದರೆ ಗಂಡನಾದ ಹರೀಶನು ಮಾತ್ರ ಮಂಜುಳಾ ಹೇಳುತ್ತಿದ್ದ ಯಾವ ಮಾತಿಗೂ ಸೊಪ್ಪನ್ನು ಹಾಕದೆ ಸುಮ್ಮನೇ ಇರುತ್ತಿದ್ದನು.

ಹೀಗೆ ಸುಮಾರು ಒಂದು ತಿಂಗಳ ನಂತರ ಪಕ್ಕದ ಮನೆಯಾಕೆಯು ಒಗೆದು ಒಣಗಲು ಹಾಕಿದ್ದ ಬಟ್ಟೆಗಳನ್ನು ಕಿಟಕಿಯ ಮೂಲಕ ಮಂಜುಳಾ ನೋಡಿದಾಗ ಶುಭ್ರವಾಗಿ ಬಟ್ಟೆಯನ್ನು ಒಗೆದು ಒಣಗಲು ಹಾಕಿದ್ದನ್ನು ಆಶ್ಚರ್ಯದಿಂದ ನೋಡಿದಳು. ನಂತರ ನೋಡಿ ಸ್ವಾಮಿ, ಪಕ್ಕದ ಮನೆಯಾಕೆ ಇಂದು ಬಟ್ಟೆಯನ್ನು ಅತ್ಯಂತ ಸ್ವಚ್ಛವಾಗಿ ಒಗೆಯುವುದನ್ನು ಕಲಿತಿದ್ದಾಳೆ. ನನಗೆ ನಿಜವಾಗಿಯೂ ಇದನ್ನು ನೋಡಿ ಆಶ್ಚರ್ಯವಾಗುತ್ತಿದೆ, ಅಥವಾ ನಿನ್ನೆ ಯಾರಾದರೂ ಆಕೆಗೆ ಸ್ವಚ್ಛವಾಗಿ ಬಟ್ಟೆ ಒಗೆಯುವುದನ್ನು ಹೇಳಿ ಕೊಟ್ಟಿರಬೇಕು ಎಂದು ಪುನಃ ಅಪಹಾಸ್ಯ ಮಾಡುತ್ತಾ ಗಂಡನಾದ ಹರೀಶನಿಗೆ ಹೇಳಿದಳು. ಆಗ ಹರೀಶನು, 'ಇವತ್ತು ನೀನು ಬೆಳಗ್ಗೆ ಏಳುವುದಕ್ಕಿಂತ ಮುಂಚೆಯೇ ನಾನು ಎದ್ದು ನಮ್ಮ ಮನೆಯ ಕಿಟಕಿಗಳ ಗಾಜುಗಳನ್ನು ಸ್ವಚ್ಛವಾಗಿ ತೊಳೆದಿದ್ದೇನೆ' ಎಂದು ಹೇಳಿದ. ಇದನ್ನು ಕೇಳಿದ ಮಂಜುಳಾಳಿಗೆ ತನ್ನ ತಪ್ಪಿನ ಅರಿವಾಯಿತು. ಗಂಡನ ಮಾತಿಗೆ ಪ್ರತ್ಯುತ್ತರವನ್ನು ನೀಡಲು ಮಂಜುಳಾಳ ಬಳಿ ಮಾತೇ ಇರಲಿಲ್ಲ. ಪಕ್ಕದ ಮನೆಯಾಕೆಯ ತಪ್ಪುಗಳನ್ನು ನೋಡಲು ಧೂಳಿನಿಂದ ಕೂಡಿದ ತನ್ನ ಮನೆಯ ಗಾಜಿನ ಕಿಟಕಿಗಳೇ ಪ್ರಮುಖ ಕಾರಣವಾಗಿತ್ತು. ಇತರರ ಯಶಸ್ಸಿನ ಕಡೆಗೆ ನಾವು ನೋಡುವ ಸಂದರ್ಭಗಳಲ್ಲಿ ನಮ್ಮ ಮನಸ್ಸಿನ ಕಿಟಕಿಗಳು ಅತ್ಯಂತ ಶುಭ್ರವಾಗಿರಬೇಕು. ಒಂದು ವೇಳೆ ಅವುಗಳು ಕೊಳೆಯಾಗಿದ್ದಲ್ಲಿ ಅವುಗಳನ್ನು ಶುಭ್ರಗೊಳಿಸುವ ಅಗತ್ಯವೂ ಇದೆ. ನಮ್ಮ ಮನಸ್ಸಿನ ಕಿಟಕಿಯ ಗಾಜುಗಳು ಧೂಳಿನಿಂದ ಕೂಡಿದ್ದರೆ ನಮ್ಮ ಎದುರಿಗೆ ಇರುವವರು ಎಷ್ಟು ಒಳ್ಳೆಯವರು ಆಗಿದ್ದರೂ ಅವರು ನಮಗೆ ಅತ್ಯಂತ ಕೆಟ್ಟವರಾಗಿಯೇ ಕಾಣಿಸುತ್ತಾರೆ.



ಲೇಖನ
■ ಸಂತೋಷ್ ರಾವ್ ಪೆರ್ಮುಡ
ಪೆರ್ಮುಡ ಮನೆ
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198.
ದೂ: 9742884160



# ಜೀವನಶೈಲಿ, ಧನಾತ್ಮಕ ವಿಚಾರಗಳಿಂದ ಆರೋಗ್ಯ ವೃದ್ಧಿ : ಡಾ. ದಡ್ಡಿ




■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಮನುಷ್ಯನ ಜೀವನದಲ್ಲಿ ಆರೋಗ್ಯ ಬಹಳಷ್ಟು ಪ್ರಮುಖವಾದದ್ದು ಆರೋಗ್ಯವನ್ನು ಕಾಪಾಡಿಕೊಳ್ಳ ಬೇಕಾದರೆ ಜೀವನಶೈಲಿ, ಧನಾತ್ಮಕ ವಿಚಾರಿಸುವ ಶಕ್ತಿಯ ಬದಲಾವಣೆಯಿಂದ ಆರೋಗ್ಯವನ್ನು ವೃದ್ಧಿಸಿಕೊಳ್ಳಲಾಗುವುದು. ನಮ್ಮ ದಿನನಿತ್ಯದ ಜೀವನದಲ್ಲಿ ಆಧ್ಯಾತ್ಮಿಕತೆಯನ್ನು ಅಳವಡಿಸಿಕೊಳ್ಳಬೇಕು ಎಂದು ನಗರದ ಖ್ಯಾತ ವೈದ್ಯ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಎಚ್ ಜಿ ದಡ್ಡಿ ಹೇಳಿದರು.

ಅವರು ಪ್ರತಿಷ್ಠಿತ ಬಿ ಎಲ್ ಡಿ ಇ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ) ಜಮಖಂಡಿಂ- ಯಲ್ಲಿ ಮಂಗಳವಾರ ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕಾಲೇಜಿನ ಸಹಪಾಧ್ಯಾಪಕರಾದ ಪ್ರೊ.ಎಲ್. ಎಮ್ ಮಾರ್ಕಪನಳ್ಳಿ ಅಧ್ಯಕ್ಷೀಯ ಪರ ನುಡಿಗಳನ್ನು ಹೇಳಿದರು. ರೆಡ್ ಕ್ರಾಸ್ ವಿಭಾಗದ ಮುಖ್ಯಸ್ಥರಾದ ಪ್ರೊ. ಅಶ್ವಿನಿ ಅನಂತಪೂರ, ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥರಾದ ಪ್ರೊ.ಪ್ರೇಮಾನಂದ ಹಿರೇಮಠ ರವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿಗಳಾದ ಮೇಘಾ ಶಿರಗುಪ್ಪಿ, ನವೀನಕುಮಾರ ಬೆಳ್ಳುಬ್ಬಿ ಅನಿಸಿಕೆ ವ್ಯಕ್ತಪಡಿಸಿದರು. ಪ್ರಶಿಕ್ಷಣಾರ್ಥಿಗಳಾದ ಶ್ರುತಿ ಗುಡದಿ ಪ್ರಾರ್ಥನೆ, ಸಂಜನಾ ಬಾಡಗಿ ಸ್ವಾಗತ ಮತ್ತು ಪುಷ್ಪಾಪಣೆ, ವಿನಯ ಕಟ್ಟಿಮನಿ ಮುಖ್ಯ ಅತಿಥಿಗಳ ಪರಿಚಯ, ರಮೇಶ ಗೊಡಚಿ, ಸೃಷ್ಟಿ ಸಿಂಧೂರ ನಿರೂಪಣೆ, ಜಯಲಕ್ಷ್ಮಿ ಅಥಣಿ ವಂದನಾರ್ಪಣೆ ಮಾಡಿದರು.



## ಡಾ.ಬಾಬು ಜಗಜೀವನ ರಾಮ್ ಜಯಂತಿ ಆಚರಿಸದ ಅಧಿಕಾರಿಯ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ದಲಿತ ಮುಖಂಡರ ಮನವಿ

# ಅಧಿಕಾರಿ ರವೀಂದ್ರ ಮುರಗಾಲಿ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹ

■ ಉದಯ ರಶ್ಮಿ ದಿನಪತ್ರಿಕೆ

ಅಥಣಿ: ತಾಲೂಕಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಕಚೇ- ರಿಯಲ್ಲಿ ಹಸಿರು ಕ್ರಾಂತಿಯ ಹರಿಕಾರ, ಮಾಜಿ ಪ್ರಧಾನಿ ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ನಿರ್ಲಕ್ಷಿಸಿದ ಅಧಿಕಾರಿ ರವೀಂದ್ರ ಮುರಗಾಲಿ ಅವರ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಶಿವಾನಂದ ಸೌದಾಗರ್ ಹಾಗೂ ದಲಿತ ಸಮುದಾಯದ ಮುಖಂಡರು ತಹಸೀಲ್ದಾರ್ ಮತ್ತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡ ಶಿವಾನಂದ ಸೌದಾಗರ್, "ತಾಲೂಕು ಆಡಳಿತದ ವತಿಯಿಂದ ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗಿದೆ. ಆದರೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಚೇರಿಯಲ್ಲಿ ಒಬ್ಬ ರಾಷ್ಟ್ರೀಯ ನಾಯಕರ ಜಯಂತಿಯನ್ನು ಆಚರಿಸದೆ ಇರುವುದು ವಿಷಾದನೀಯ. ಈ ಬಗ್ಗೆ ಅಧಿಕಾರಿ ರವೀಂದ್ರ ಮುರಗಾಲಿ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿದಾಗ, ಸಂಜೆ 4 ಗಂಟೆಯ ಸುಮಾರಿಗೆ ಸಿಬ್ಬಂದಿ ಬಂದು ಕಾಟಾಚಾರಕ್ಕೆ ಪೂಜೆ ಸಲ್ಲಿಸಿದ್ದಾರೆ," ಎಂದು ಅಸಮಾಧಾನ ವ್ಯಕ್ತಪಡಿಸಿದರು.

"ಮಾರನೇ ದಿನ ಅಧಿಕಾರಿಯನ್ನು ಭೇಟಿ ಮಾಡಿ ಪ್ರಶ್ನಿಸಿದಾಗ, 'ನನಗೂ ಇದಕ್ಕೂ ಸಂಬಂಧವಿಲ್ಲ, ನಾನು ರಜೆಯಲ್ಲಿ ಇದ್ದೆ,ನಾನು ಸಿಬ್ಬಂದಿಗೆ ಹೇಳಿದ್ದೆ. ಅವರ ಮೇಲೆ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ತಿಳಿಸುತ್ತೇನೆ' ಎಂದು ಉಡ- ಾಫೆಯ ಉತ್ತರ ನೀಡಿದ್ದಾರೆ. ಕಚೇರಿ ಆವರಣದಲ್ಲಿ ಪ್ರತಿಭಟಿಸುತ್ತಿದ್ದ ನಮ್ಮನ್ನು ಮಾತನಾಡಿಸದೆ ಹೋದ ಅಧಿಕಾರಿಯ ನಡವಳಿಕೆ ಅತ್ಯಂತ ಬೇಸರ ತಂದಿದೆ. ಕೂಡಲೇ ಇಂತಹ ಬೇಜವಾಬ್ದಾರಿ ಅಧಿಕಾರಿಯ ಮೇಲೆ ಕಠಿಣ ಶಿಸ್ತು ಕ್ರಮ ಕೈಗೊಳ್ಳಬೇಕು," ಎಂದು ಅವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶಂಕರ ಶಿಂದೆ, ಸದಾಶಿವ ಸಿಕ್ರೆ, ಅಪ್ಪಾಸಾಬ ಸೌದಾಗರ್, ಶೇಖರ್ ಸೌದಾಗರ, ಕಿಶನ್ ಸೌದಾಗರ, ಅಶೋಕ್ ಕಾಂಬಳೆ, ಸಂಜು ರಾಯಬಾಗಕರ್, ಕುಮಾರ ಸಣ್ಣಕ್ಕಿ, ಸುನೀಲ್ ಹರಳೆ, ಜವಾಹರಲಾಲ್ ಸೌದಾಗರ, ಸೇರಿದಂತೆ ದಲಿತ ಸಮುದಾಯದ ಕಾರ್ಯಕರ್ತರು ಉಪಸ್ಥಿತರಿದ್ದರು.

## ಯತ್ನಾಳಗೆ ಬಿಜೆಪಿ ಅನಿವಾರ್ಯ । ವಿಜಯಪುರದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ ಹೇಳಿಕೆ

# ಯತ್ನಾಳ ವರ್ತನೆ ಬದಲಾದರೆ ಮಾತ್ರ ಬಿಜೆಪಿಗೆ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಬಿಜೆಪಿ ಒಂದು ಶಿಸ್ತಿನ ಪಕ್ಷವಾಗಿದ್ದು, ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರಿಗೆ ಬಿಜೆಪಿ ಅನಿವಾರ್ಯ ಇದೆ. ಆದರೆ ಬಿಜೆಪಿಗೆ ಯತ್ನಾಳ ಅನಿವಾರ್ಯ ಇಲ್ಲ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಒಂದು ಶಿಸ್ತಿನ ಪಕ್ಷವಾಗಿದೆ. ಬಿಜೆಪಿ ಪಕ್ಷಕ್ಕೆ ತನ್ನದೇ ಯಾದ ಸಿದ್ಧಾಂತ ಹೊಂದಿದೆ. ಪಕ್ಷಕ್ಕೆ ಯಾರಿಂದ ಅನಿವಾರ್ಯ ಇಲ್ಲ. ಪಕ್ಷದ ಅನಿವಾರ್ಯ ಎಲ್ಲ- ರಿಗೂ ಇದೆ. ಯತ್ನಾಳ ಅವರ ಅವಶ್ಯಕತೆ ಪಕ್ಷಕ್ಕೆ ಇಲ್ಲ, ಆದ- ರೆ ಪಕ್ಷದ ಅನಿವಾರ್ಯ ಎಂದು ಹೇಳಿದರು. ಬಾಗಲಕೋಟೆ ಉಪಚುನಾವಣೆಯಲ್ಲಿ ಶಾಸಕ ಯತ್ನಾಳ ಅವರು ಬಿಜೆಪಿ ಪರ ಪ್ರಚಾರದ ಕುರಿತು ಹೇಳಿಕೆ ನೀಡಿದ ಅವರು, ಬಾಗಲಕೋಟೆ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳಿಗೆ ಆಪ್ತರಾಗಿದ್ದ- ರಿಂದ ಚುನಾವಣೆ ಪ್ರಚಾರಕ್ಕೆ ಹೋಗಿದ್ದಾರೆ. ಅವರಿಗೆ ಬಿಜೆಪಿ ಯಿಂದ ಯಾರೂ ಆಹ್ವಾನ ನೀಡಿಲ್ಲ ಎಂದು ಸ್ಪಷ್ಟಪಡಿಸಿದರು.

ಯತ್ನಾಳವರು ತಮ್ಮ ವರ್ತನೆ ಬದಲಾವಣೆ ಮಾಡಿಕೊಂಡರೆ ಬಿಜೆಪಿಗೆ ಸ್ವಾಗತ..! ರಾಜ್ಯದಲ್ಲಿ ಬಿಜೆಪಿ ಪಕ್ಷ ಕಟ್ಟಿ ಬೆಳೆಸಿದವ- ರಿಗೆ ಹಾಗೂ ರಾಜ್ಯಾಧ್ಯಕ್ಷರ ಕು- ರಿತು ಅಗೌರವವಾಗಿ ಮಾತ ನಾಡುವುದು ಸರಿಯಲ್ಲ. ಮೋದಿಯವರು ರಾಷ್ಟ್ರೀಯ ಅಧ್ಯಕ್ಷರು ವಯಸ್ಸಿನಲ್ಲಿ ಚಿಕ್ಕವ- ರಿದ್ದರು, ಅವರಿಗೆ ಗೌರವದಿಂದ ಮಾತನಾ ಡುತ್ತಾರೆ. ಆದರೆ ಯತ್ನಾಳ ಅವರು ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಹೇಳಿಕೆ ನೀಡಿತ್ತಾರೆ. ಪಕ್ಷದ ವಿರುದ್ಧ ಹೇಳಿಕೆ ನೀಡುವುದನ್ನು ವರ್ತನೆ ಬದಲಾವಣೆ ಮಾಡಿಕೊಳ್ಳಬೇಕು. ವರ್ತನೆ ಸರಿ ಮಾಡಿಕೊಂಡು ಬಂದರೆ ಅವರಿಗೆ ಬಿಜೆಪಿಗೆ ಸ್ವಾಗತಿಸುತ್ತೇನೆ ಎಂದರು.

# ಸಾಲೋಟಗಿಯಲ್ಲಿ ಸಂಭ್ರಮದ ನೀರಾಟ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ತಾಲೂಕಿನ ಸಾಲೋಟಗಿ ಗ್ರಾಮದ ಶ್ರೀ ಶಿವಯೋಗೀಶ್ವರ ಜಾತ್ರೆಯ ನಿಮಿತ್ತ ನೀರಾಟ ವಿಬ್ರುಂಜಣೆಯಿಂದ ಜರುಗಿತು.

ರಾತ್ರಿ 1 ಗಂಟೆಗೆ ಪಾಲ್ಗೊಂಡ ಯುವಕರು ಮತ್ತು ಭಕ್ತರು ಬೆಳಗ್ಗೆ 6 ಗಂಟೆಯ ವರೆಗೆ ನೀರಾಟದಲ್ಲಿ ಪಾಲ್ಗೊಂಡಿದ್ದರು. ಶ್ರೀ ಶಿವಯೋಗೀಶ್ವರ ಹೊರಗಿನ ದೇವಸ್ಥಾನದ ಹತ್ತಿರ ಇರುವ ಬಾವಿಯಿಂದ ನೀರನ್ನು ಕೊಡದಲ್ಲಿ ಬಿಂದಿಗೆಯಲ್ಲಿ ತಂದು ದೇವಸ್ಥಾನದಲ್ಲಿರುವ ಗಂಗಮ್ಮನ ಬಿಂದಿಗೆಯ ಮೇಲೆ ಸುರಿಯುವದೇ ನೀರಾಟ ವೈಶಿಷ್ಟ.ಹಿನ್ನೆಲೆ – ಶಿವಯೋಗೀಶ್ವರರು ಗಂಗಾಬಿಕೆಯೊಂದಿಗೆ ಮದುವೆ ಆಗುವಾಗ ಬ್ರಹ್ಮಚಾರಿಯಾದ ಶಿವಯೋಗೀಶ್ವರರು ಮದುವೆ ಮಂಟಪದಿಂದ ಹೊರಗೆ ಹೋಗುತ್ತಾರೆ. ಸುರಿಗೆಯ ನೀರು ಗಂಗಾಬಿಕೆ ಮೇಲೆ ಮಾತ್ರ ಬಿಳುತ್ತದೆ. ಈ ಘಟನೆಯು ಕಣಮನ ಸೆಳೆಯುವ ನೀರಾಟವು ಸಂಕೇತಿಸುತ್ತದೆ. ಗಂಗಾಬಿಕೆಯನ್ನು ಸಂಕೇತಿಸುವ ಗಂಗಮ್ಮನ ಬಿಂದಿಗೆಗೆ ಶ್ರೀಗಂಧ ಛಡಿಗಳಿಂದ ಭದ್ರಪಡಿಸಲಾಗಿರುತ್ತದೆ. ಮದುವೆ ಮಂಟಪದಂತಿರುವ ಕಲ್ಲು ಮಂಟಪಕ್ಕೆ ಸಮೀಪ ಗುಡಿಯ ಮುಂದೆ ಬಾವಿ ಇದೆ. ಇದನ್ನು ಗಂಗಮ್ಮನ ಬಾವಿ ಎಂದು ಕರೆಯುತ್ತಾರೆ. ಭಕ್ತರು ಮಧ್ಯರಾತ್ರಿಯಿಂದ ನಸುಕಿನ ವರೆಗೆ ಈ ಬಾವಿಯಿಂದ ನೀರು ತಂದು ಪಂಚರು ಹೊತ್ತ ಗಂಗಮ್ಮನ ಬಿಂದಿಗೆಯ ಮೇಲೆ ಶಿವಯೋಗೀಶ್ವರ ಹೋಗಿರ ಎಂದು ಜಪ ಮಾಡುತ್ತ ಕಲ್ಲು ಮಂಟಪದ ಸುತ್ತ ಐದು ಸುತ್ತುಗಳಾಗುವವರೆಗೆ ನೀರು ಸುರಿಯುತ್ತಾರೆ. ಕರಡು ಮಜಲು ಆರತಿ ಹಿಡಿದು ಹೆಣ್ಣುಮಕ್ಕಳು ನೀರು ನೀಡುವ ಭಕ್ತರು ನೋಡಲು ಮೇಳೈಸಿದ ಭಕ್ತ ಸಮೂಹ ಈ ಒಟ್ಟು ದೃಶ್ಯವು ಕೈಲಾಸವನ್ನು ಹೋಲುತ್ತದೆ. ನಂತರ ಬಿಂದಿಗೆಯನ್ನು ಗರ್ಭ ಗುಡಿಯಲ್ಲಿಯ ಶಿವಯೋಗೀಶ್ವರರ ಎಡಕ್ಕೆ ಇಡಲಾಗುತ್ತದೆ. ಬಿಂದಿಗೆಯಲ್ಲಿ ಸಂಗ್ರಹವಾದ ನೀರಿನ ಪ್ರಮಾಣದ ಮೇಲೆ ಆ ವರ್ಷದ ಮಳೆಯ ಬೆಳೆಯ ಭವಿಷ್ಯ ನುಡಿಯಲಾಗುತ್ತದೆ. ನೀರಾಟ ವಾದ ಒಂಬತ್ತು ದಿನಗಳ ವರೆಗೆ ನಸುಕಿನಲ್ಲಿ ಮತ್ತು ಸಂಜೆ ಶಿವಪೂಜೆ ನಡೆಯುತ್ತದೆ. ತದನಂತರ ಗಂಗಾಬಿಕೆಯ ಉಡಿ ತುಂಬಿ ಮೆರವಣಿಗೆಯಲ್ಲಿ ಊರೊಳಗಿನ ಗುಡಿಗೆ ತರಲಾಗುತ್ತದೆ. ಅಂದು ಜಾತ್ರೆ ಸಂಪನ್ನವಾಗುತ್ತದೆ.

ಶ್ರೀ ಶಿವಯೋಗೀಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಸೋಮಯ್ಯ ಚಿಕ್ಕಪಟ, ಮಲ್ಲನಗೌಡ ಪಾಟೀಲ, ಭೀಮರಾಯಗೌಡ ಪಾಟೀಲ, ರಾಜು ಗೌಡ ಪಾಟೀಲ, ಸಾಹಿತಿ ಗೀತಯೋಗಿ, ಶಿವಯೋಗಪ್ಪ ಜೊತಗೊಂಡ, ಜೀತಪ್ಪ ಕಲ್ಯಾಣಿ, ಶಿವಯೋಗಪ್ಪ ಚನಗೊಂಡ,ವಿನೋದ ಗಾಣಿಗೇರ, ಮಲ್ಲಿಕಾರ್ಜುನ ಕುವಡೆ, ಡಾ॥ ಅನೀಲ ವಾಲಿ ಮತ್ತಿತರಿದ್ದರು.

# ಸಾಮೂಹಿಕ ವಿವಾಹಗಳೇ ಶ್ರೇಷ್ಠ :ಯರನಾಳ ಶ್ರೀಗಳು

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಸಾಮೂಹಿಕ ಮದುವೆಗಳು ಆರ್ಥಿಕ ಹೊರೆಯನ್ನು ಕಡಿಮೆ ಮಾಡುವದರ ಜತೆಗೆ ಕುಟುಂಬಗಳನ್ನು ಸಂಕಷ್ಟದಿಂದ ಪಾರು ಮಾಡುತ್ತವೆ. ನಾಡಿನ ಸಂತರ ಶರಣರ ಸ್ವಾಮೀಜಿಗಳ ಸಮ್ಮುಖದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟವರು ಪುಣ್ಯವಂತರು ಎಂದು ಯರನಾಳದ ಶ್ರೀ ಸಂಗನಬಸವ ಶ್ರೀಗಳು ಹೇಳಿದರು.

ತಾಲೂಕಿನ ಲಚ್ಯಾಣದ ಶ್ರೀ ಸಿದ್ದಲಿಂಗ ಮಹಾರಾಜರ ಮಠದಲ್ಲಿ ಶ್ರೀ ಶಂಕರಲಿಂಗ ಜಾತ್ರಾ ಮಹೋತ್ಸವ ನಿಮಿತ್ಯ ನಡೆದ ಧರ್ಮಸಭೆ ಮತ್ತು ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಾಮೂಹಿಕ ವಿವಾಹದಿಂದ ದುಂದು ವೆಚ್ಚ ಕಡಿವಾಣ ಹಾಕುವದರ ಜತೆಗೆ ಸಮಾಜದಲ್ಲಿ ಸಾಮರಸ್ಯ ವೃದ್ದಿಸುತ್ತದೆ ಎಂದರು.

ತುಂಗಳದ ಅನುಸುಯ ಅಮ್ಮನವರು ಮಾತನಾಡಿ ಸಾಮೂಹಿಕ ವಿವಾಹದಿಂದ ಸಮಾಜದಲ್ಲಿ ಸಾಮರಸ್ಯ ಸಹಬಾಳ್ವೆ ಮತ್ತು ಸೌಹಾರ್ದತೆ ಹೆಚ್ಚಿಸುತ್ತದೆ. ಸರಳ ವಿವಾಹಕ್ಕೆ ಮಾದರಿಯಾಗುವ ಮೂಲಕ ದೇಶದ ಪ್ರಗತಿಗೂ ಸಹಕಾರಿಯಾಗಿ ಎಂದರು.

ಮಂಜುನಾಥ ವಂದಾಲ, ಧರ್ಮರಾಜ ಮುಜಗೊಂಡ, ಸಿದ್ದಾರ್ಥ ಬೈಚಬಾಳ, ಎಂ.ಎಲ್ ಮುಜಗೊಂಡ, ನಿವೃತ್ತ ಪ್ರಾಚಾರ್ಯ ಎ.ಪಿ.ಕಾಗವಾಡಕರ ಮುರಲೀಧರ ಬಜಂತ್ರಿ ಮಾತನಾಡಿದರು.

ವೇದಿಕೆಯ ಮೇಲೆ ಲಚ್ಯಾಣದ ಪೀಠಾಧಿಪತಿ ಡಾ. ವೃಷಭಲಿಂಗೇಶ್ವರ ಶ್ರೀಗಳು, ಸಿದ್ದಲಿಂಗ ದೇವರು ಜಕನೂರ, ಶಿವಾನಂದ ಶ್ರೀಗಳು ಹಳಂಗಳಿ, ದ್ರಾಕ್ಷಾಯಿಣಿ ಅಮ್ಮನವರು ಹೂವಿನ ಹಿಪ್ಪರಗಿ, ಅಕ್ಕಮಹಾದೇವಿ ಅಮ್ಮನವರು ಚಿಕ್ಕಪಡಸಲಗಿ, ಶಂಕರಲಿಂಗ ಶ್ರೀಗಳು ಆಳೂರ, ಬಾಬುರಾವ ಮಹಾರಾಜರು, ಬಸಯ್ಯ ಶ್ರೀಗಳು ಮದರಖಂಡಿ, ಬಸವಂತರಾಯಗೌಡ ಪಾಟೀಲ, ಕಲ್ಲನಗೌಡ ಪಾಟೀಲ ಆನಂದ ಮೇತ್ರಿ ಪಿ.ಎಸ್.ಐ ಆನಂದ ಮೇತ್ರಿ ದಂಪತಿಗಳು, ಸಿಡಿಪಿಒ ಗೀತಾ ಗುತ್ತರಗಿಮಠ ಡಾ. ಲಕ್ಷ್ಮೀಕಾಂತ ಮೇತ್ರಿ, ಮತ್ತಿತರಿದ್ದರು.

ಸಂತೋಷ ಜತ್ತಿ ಇವರು ನೂತನ ಕಟ್ಟಡಕ್ಕೆ ಒಂದು ಲಕ್ಷ ರೂ ದೇಣಿಗೆ ನೀಡಿದರು. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಮತ್ತು ಪಿಯುಸಿ ಯಲ್ಲಿ ಅತಿ ಹೆಚ್ಚು ಅಂಕ ಪಡೆದ ಲಚ್ಯಾಣದಲ್ಲಿ ಓದಿದ ವಿದ್ಯಾರ್ಥಿಗಳನ್ನು ಶ್ರೀ ಮಠದ ವತಿಯಿಂದ ಸನ್ಮಾನಿಸಲಾಯಿತು.

ಸಾಮೂಹಿಕ ವಿವಾಹದಲ್ಲಿ 42 ಜೋಡಿಗಳು ಪಾಲ್ಗೊಂಡಿದ್ದರು.

# ಆರೋಗ್ಯಕರ ಭವಿಷ್ಯಕ್ಕೆ ವಿಜ್ಞಾನದ ಜೊತೆ ನಿಲ್ಲಿ :ಡಾ.ಗೋಪಿನಾಥ್

■ ಉದಯರಶ್ಮಿ ದಿನಪತ್ರಿಕೆ




ಹೆಚ್ ಡಿ ಕೋಟೆ: ವಿಶ್ವ ಆರೋಗ್ಯ ದಿನದ ಉದ್ದೇಶ ಜನರಿಗೆ ಕಾಲಕ್ಕೆ ಅನುಗುಣವಾಗಿ ಆರೋಗ್ಯದ ಮಾಹಿತಿಯನ್ನು ನೀಡುವುದು, ಮತ್ತು ಜನರು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಈ ದಿನವನ್ನು ಆಚ- ರಣೆ ಮಾಡುತ್ತಿದ್ದೇವೆ ಎಂದು ಮೈಸೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಗೋಪಿನಾಥ್ ತಿಳಿಸಿದರು. ಹಾರ್ಟ್ ಸಂಸ್ಥೆ ಮೈಸೂರು ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಂಯುಕ್ತ ಆಶ್ರಯದಲ್ಲಿ ವಿಶ್ವ ಆರೋಗ್ಯ ದಿನದ ಕು- ರಿತು ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿ ಅವರು ಮಾತನಾಡಿದರು. ಜಿಲ್ಲಾ ಕುಷ್ಠ ರೋಗ ನಿಯಂತ್ರಣಾಧಿಕಾರಿ ಮತ್ತು ತಾಲೂಕು ನೋಡಲ್ ಅಧಿಕಾರಿ ಡಾ. ಬೃಂದಾ ಮಾತನಾಡಿ, ಆರೋಗ್ಯವನ್ನು ಕಾಪಾಡಿಕೊಳ್ಳಲು ವಿಜ್ಞಾನದ ಸಹಕಾರವನ್ನು ಪಡೆದುಕೊಳ್ಳಬೇಕಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿ ವರ್ಷ ವಿಶ್ವ ಸಂಸ್ಥೆ ಒಂದೊಂದು ಘೋಷವಾಕ್ಯವನ್ನು ಇಟ್ಟುಕೊಂಡು ಆಚರಣೆ ಮಾಡಲಾಗುತ್ತದೆ. ಇವಾಗ ನಾವು ಬೇಸಿಗೆ ಕಾಲದಲ್ಲಿ ಇದ್ದೇವೆ. ಈ ಸಮಯದಲ್ಲಿ ತುಂಬಾ ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ. ಇದರ ಬಗ್ಗೆ ಸದಾ ಜಾಗೃತಿಯಿಂದ ಇರಬೇಕು ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಟಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮನುಷ್ಯನ ಜೀವನ ಶೈಲಿಯಲ್ಲಿ ಬದಲಾವಣೆ ಕಂಡು ಬಂದಿದ್ದು, ತಿನ್ನುವ ಆಹಾರ, ತೊಡುವ ಬಟ್ಟೆ ಎಲ್ಲವು ಬದಲಾವಣೆಯಾಗಿದೆ. ಈ ವರ್ಷದ ಘೋಷವಾಕ್ಯ ಆರೋಗ್ಯಕ್ಕಾಗಿ ಒಟ್ಟಾಗಿ ವಿಜ್ಞಾನದೊಂದಿಗೆ ನಿಲ್ಲು ಎಂಬ ಸಂದೇಶದೊಂದಿಗೆ ಗ್ರಾಮೀಣ ಭಾಗದಲ್ಲಿ ಜೀವನ ಶೈಲಿಯಲ್ಲಿ ಬದಲಾವಣೆ ತರಲು ಮಾಹಿತಿಯನ್ನು ನೀಡಿ ಸಮುದಾಯದಲ್ಲಿ ಜಾಗೃತಿಗೊಳಿಸಲು ನಮ್ಮ ಆರೋಗ್ಯ ಇಲಾಖೆ ಸದಾ ಕಾರ್ಯಾನ್ಮುಖರಾಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಹಾರ್ಟ್ ಸಂಸ್ಥೆಯ ಸಂಯೋಜಕ ಶಿವಲಿಂಗ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಶರತ್ ಹೆಚ್.ಎಸ್., ಡಾ.ಚಂದ್ರಕಲಾ, ಡಾ. ಹರ್ಷ, ಡಾ. ಕೀರ್ತಿ, ಡಾ. ಮನೋಹರ್, ಡಾ.ಪಾಥ- ರ್ಸಾರಥಿ, ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾ- ರಿಗಳು ಆಶಾ ಕಾರ್ಯಕರ್ತೆಯರು , ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಸಿಬ್ಬಂದಿ ವರ್ಗದವರು, ಸಾರ್ವಜನಿಕರು ಇದ್ದರು.

# ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾರಾಟಕ್ಕೆ ಪುಸ್ತಕಗಳು ಲಭ್ಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಪ್ರಕಟಣೆಯಾಗಿರುವ ಪುಸ್ತಕಗಳು ಮಾರಾಟಕ್ಕೆ ಲಭ್ಯವಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಯಲ್ಲಿ ಲಭ್ಯವಿರುತ್ತವೆ. ಸಾಹಿತ್ಯಾಸಕ್ತರು ಪುಸ್ತಕಗಳನ್ನು ಕಚೇರಿ ವೇಳೆಯಲ್ಲಿ ಖರೀದಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ:08352-251261 ಸಂಪರ್ಕಿಸಬಹುದಾಗಿದೆ ಎಂದು ಸಹಾಯಕ ನಿರ್ದೇಶಕ ಸಂತೋಷ ಭೋವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಡವಡಗಿಯಲ್ಲಿ ಮೆಗಾ ಕ್ರಾಸ್ ಕಂಟ್ರಿ ಓಟದ ಸ್ಪರ್ಧೆಗೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ತಾಲೂಕಿನ ಶರಣಕ್ಷೇತ್ರ ವಡವಡಗಿ ಗ್ರಾಮದ ಗುರುವೀರಸಿದ್ಧ ಶಿವಯೋಗಿಗಳ 76 ನೇ ಜಾತ್ರಾಮಹೋತ್ಸವ ಹಾಗೂ ಮಲ್ಲಿಕಾರ್ಜುನ ಸ್ವಾಮೀಜಿಯವರ ಚತುರ್ಥ ಪುಣ್ಯಾರಾಧನೆಯಂಗವಾಗಿ ಸೋಮವಾರ ಪ್ರಥಮ ಬಾರಿಗೆ ಗ್ರಾಮದ ಸೈನಿಕ ಬಳಗದ ಸಹಯೋಗದಲ್ಲಿ ಐದು ಕಿಲೋ ಮೀಟರ್ ಮೆಗಾ ಕ್ರಾಸ್ ಕಂಟ್ರಿ ಓಟದ ಸ್ಪರ್ಧೆ ಜರುಗಿತು.

ಓಟದ ಸ್ಪರ್ಧೆಗೆ ನಂದಿಮಠದ ವೀರಸಿದ್ಧ ಸ್ವಾಮೀಜಿ ಚಾಲನೆ ನೀಡಿ ಮಾತನಾಡಿದ ಅವರು ಶ್ರೀಮಠದ ಜಾತ್ರಾ ಮಹೋತ್ಸವದಂಗವಾಗಿ ಸೈನಿಕ ಬಾಂಧವರು ಪ್ರಥಮ ಬಾರಿಗೆ ಯುವಕರ ನಡೆ ಕ್ರೀಡೆಯೆಡೆಗೆ ಧ್ಯೇಯದೊಂದಿಗೆ ಇಂತಹ ಓಟದ ಸ್ಪರ್ಧೆ ಹಮ್ಮಿಕೊಂಡಿರುವುದು ಶ್ಲಾಘನೀಯ. ಇದು ಯುವಜನಾಂಗವು ಅಧ್ಯಯನದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಲು ಪ್ರೇರಣೆ ನೀಡುವಂತಾಗಲೆಂದು ಆಶಯ ವ್ಯಕ್ತಪಡಿಸಿದರು.

ಮಾಜಿ ಸೈನಿಕ ಭೀಮನಗೌಡ ಪಾಟೀಲ ಮಾತನಾಡಿ, ಯುವಜನಾಂಗಕ್ಕೆ ದೇಶ ಪ್ರೇಮ, ಸೇವೆ ಸಲ್ಲಿಸಲು ಪ್ರೇರಣೆ ನೀಡುವ ಸದುದ್ದೇಶದಿಂದ ಇಂತಹ ಓಟದ ಸ್ಪರ್ಧೆಯನ್ನು ಆಯೋಜನೆ ಮಾಡಿರುವದು ಒಳ್ಳೆಯದು. ಯುವಜನಾಂಗವು ಸೈನಿಕರಾಗಲು ಉತ್ತಮ ದೈಹಿಕ ಸಾಮರ್ಥ್ಯ ಹೊಂದುವ ಜೊತೆಗೆ ಉತ್ತಮ ನಡುವಳಿಕೆ ಹೊಂದಬೇಕು. ಸೈನ್ಯಕ್ಕೆ ಸೇರಲು ಬೇಕಾದ ಅರ್ಹತೆ ಕುರಿತು ಹೇಳಿದರು.

ಈ ಸಂದರ್ಭದಲ್ಲಿ ಯಡ್ರಾಮಿಶ್ರೀಗಳು, ಸೈನಿಕ ಬಾಂಧವರಾದ ಸಂಗಪ್ಪ ಹೂಗಾರ, ಮಡಿವಾಳಪ್ಪ ಕಟ್ಟೀಮನಿ, ನಿಂಗನಗೌಡ ಮುರಾಳ, ಗಂಗಾಧರ ಪತ್ತಾರ, ಬಾಬುಗೌಡ ಸೇರಿದಂತೆ ಹಲವರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR